ಸಂಪುಟ : 9 ಸಂಚಿಕೆ 145 ಪುಟ : 4 ಬೆಲೆ: 3.00 ಶನಿವಾರ ಜುಲೈ 13 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 145 Pages : 4 Price : 3.00 Saturday July 13 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿದ ಸಚಿವ ಎಚ್.ಕೆ. ಪಾಟೀಲ

ಜಿಲ್ಲೆಯ ಅಭಿವೃದ್ಧಿ ಪಥ ತೀವ್ರಗೊಳಿಸಲು ಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಪ್ರಥಮ ಹಂತದಲ್ಲಿ 100 ಗ್ರಾಮಗಳನ್ನು ವ್ಯಾಜ್ಯ ಮುಕ್ತವಾಗಿಸಲು ಸಿದ್ಧತೆ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯ ಅಭಿವೃದ್ಧಿ ಪಥ ತೀವ್ರಗೊಳಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳುವ ಮೂಲಕ ಅಭಿವೃದ್ಧಿ ತೀವ್ರಗೊಳಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ತಿಳಿಸಿದರು.

ಗದಗ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಚಿವರು ಮಾತನಾಡಿದರು.

ಹೊಸ ಆರ್ಥಿಕ ವರ್ಷ ಪ್ರಾರಂಭವಾದ ಹಿನ್ನೆಲೆಯಲ್ಲಿ ನಮ್ಮ ಸರ್ಕಾರದ ಬದ್ಧತೆಯ ಕುರಿತು ಎಲ್ಲ ಅಧಿಕಾರಿಗಳಿಗೆ ತಿಳಿಸಲಾಗಿದೆ.

ಜಿಲ್ಲೆಯಲ್ಲಿ ಜನವರಿಯಿಂದ ಇದುವರೆಗೆ 1479 ಡೆಂಘೀ ಸಂಶಯಾಸ್ಪದ ಪ್ರಕರಣಗಳು ಕಂಡುಬಂದಿವೆ. ಅದರಲ್ಲಿ 1102 ಪ್ರಕರಣಗಳನ್ನು ಪರೀಕ್ಷಿಸಲಾಗಿದ್ದು, 70 ಡೆಂಘೀ ಪ್ರಕರಣಗಳು ಖಚಿತಪಟ್ಟಿವೆ. 49 ಜನರಿಗೆ ಚಿಕಿತ್ಸೆ ನೀಡಲಾಗುತ್ತಿದೆ. 32 ಜನರು ಗದಗನ ಜಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. 12 ಜನ ಐಸಿಯುನಲ್ಲಿದ್ದಾರೆ. 2 ಜನರು ವೆಂಟಿಲೇಟರ್‌ನಿಂದ ಹೊರಬಂದಿದ್ದಾರೆ. ಸಾರ್ವಜನಿಕರು ಡೆಂಘೀ ಲಕ್ಷಣಗಳಿದ್ದಲ್ಲಿ ನಿರ್ಲಕ್ಷ್ಯ ವಹಿಸದೇ ತಕ್ಷಣ ಚಿಕಿತ್ಸೆಗೆ ಒಳಗಾಗಬೇಕು.

– **ಎಚ್.ಕೆ. ಪಾಟೀಲ**. ಜಿಲ್ಲಾ ಉಸ್ತುವಾರಿ ಸಚಿವರು.

ಪ್ರವಾಸೋದ್ಯಮ ಅಭಿವೃದ್ಧಿ

ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗಿದೆ. ಅದರಲ್ಲಿ ಕಪ್ಪತಗುಡ್ಡದ ಅಭಿವೃದ್ಧಿ ಬಹಳ ಮುಖ್ಯವಾಗಿದ್ದು, ಅನುಷ್ಠಾನಗೊಳಿಸಲಾಗುತ್ತಿದೆ. ಬಿಂಕದಕಟ್ಟಿ ಪ್ರಾಣಿ ಸಂಗ್ರಹಾಲಯದಲ್ಲಿ ನೈಟ್ ಸಫಾರಿ ಯೋಜನೆಯನ್ನು ಜಾರಿಗೊಳಿಸಲು ಸಿದ್ಧತೆ ಕೈಗೊಳ್ಳಲು ಸೂಚಿಸಲಾಗಿದೆ. ಇದಕ್ಕಾಗಿ 4 ಕೋಟಿ ರೂ.ಗಳ ಅನುದಾನ ಒದಗಿಸಲು ಆದೇಶಿಸಲಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ವಿವರಿಸಿದರು.

ಆಡಳಿತ ಪಾರದರ್ಶಕವಾಗಿರಬೇಕು. ಜನಸ್ನೇಹಿಯಾಗಿ ಸರ್ಕಾರಿ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು. ನಾಗರಿಕರೊಂದಿಗೆ ಗೌರವದಿಂದ ಹಾಗೂ ಸೌಜನ್ಯದಿಂದ ವರ್ತಿಸಿ ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಗದಗ ಜಿಲ್ಲೆಯು ಇ-ಆಫೀಸ್ ನಿರ್ವಹಣೆಯಲ್ಲಿ ಪ್ರಥಮ ಸ್ಥಾನಲ್ಲಿರಬೇಕು. ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಇ-ಆಫೀಸ್ ಪ್ರಾರಂಭ ಮಾಡಬೇಕು. ಆಗಸ್ಟ 12ರೊಳಗಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳು ಆಡಳಿತವನ್ನು ಇ-ಆಫೀಸ್‌ನಲ್ಲಿ ಪ್ರಾರಂಭಿಸಬೇಕು. ಜಿಲ್ಲೆಯಲ್ಲಿ ಸಕಾಲ ಯೋಜನೆ ಪರಿಣಾಮಕಾರಿಯಾಗಿ ನಡೆಯಲು ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗಿದೆ. ಸಕಾಲ ಯೋಜನೆ ಹಾಗೂ ಜನತಾ ದರ್ಶನ ಕಾರ್ಯಕ್ರಮದಡಿ ಸ್ವೀಕರಿಸಲಾದ ವಿವಿಧ ಇಲಾಖೆಗಳಿಗೆ ಸಂಬಂಧಿತ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇಲಾಖೆಯಲ್ಲಿ ಅಕ್ಟೋಬರ್ 2ರೊಳಗಾಗಿ ಬಾಕಿ ಇರುವ ಅರ್ಜಿ ವಿಲೇವಾರಿಗೊಳಿಸಲು ತಿಳಿಸಲಾಗಿದೆ ಎಂದರು.

▸▸ ಒನೇ ಪುಟಕ್ಕೆ

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜು. 13-7-2024 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ಗಂಗಿಮಡಿ ಅಪಾರ್ಟ್ಮೆಂಟ್ 2 ಭಾಗಗಳು, ಕನ್ನಡ ಶಾಲೆ, ಯಲ್ಲಮ್ಮನ ಗುಡಿ, ಶಿವಪ್ಪರವರ ಲೈನ್, ಆಟೋ ಸ್ಟ್ಯಾಂಡ್ ಲೈನ್, ಮೇದಾರರ ಲೈನ್, ದಖನಿಯವರ ಲೈನ್. ವಾರ್ಡ್ ನಂ. 34 ಹುಡ್ಕೋ ಪೂರ್ತಿ ಭಾಗಗಳು, ವಡ್ಡರಗೇರಿ, ಕೊರವರ ಓಣಿ, ಮೂರು ಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್ 1, 3ನೇ ರಸ್ತೆ, ಸಚ್ಚಿದಾನಂದ ಮಠ, ಹನುಮಂತ ದೇವರ ಗುಡಿ, ಈಶ್ವರ ಗುಡಿ, ಈ ಡಬ್ಲ್ಯೂ ಎಸ್ ಮಸೂತಿ ಲೈನ್, ಶರಣಬಸವೇಶ್ವರ ಶಾಲೆಯ ಸುತ್ತ ಮುತ್ತಲಿನ ಲೈನ್ ಗಳು.

ವಾರ್ಡ್ 35 ಆದರ್ಶ ನಗರ, ಹನುಮಂತ ದೇವರ ಗುಡಿ, ಬಿದರೂರ ಸರ್ ಲೈನ್, ದೇವರಾಜ್ ಹಾಸ್ಟೆಲ್, ರಾಮನಗರ, ಸೇವಾಲಾಲ ನಗರ, ಬಾಪೂಜಿ ನಗರ, ನೀಲಮ್ಮ ತಾಯಿಮಠ, 9 ನಂ ಶಾಲೆ ಉಳಿದ ಕೆಲವು ಭಾಗಗಳು. ವಾರ್ಡ್ 33 ಮುಳಗುಂದ ನಾಕಾ ರಸ್ತೆ, ಕೇಶವ ನಗರ ರಿಂಗ್ ರೋಡ್, ಬ್ಯಾಂಕರ್ಸ್ ಕಾಲೋನಿ, ಹುಬ್ಬಳ್ಳಿ ರೋಡ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ 20, 21, 23 ಕಗನಳ್ಳಿ, ಆರೋಗೇರಿ, ಹೆಬಸೂರು ಲೈನ್, ಹೊನ್ನೆತ್ತಮ್ಮ ಗುಡಿ 2 ಭಾಗಗಳು, ಸೋಮನಗೌಡ್ರ ಲೈನ್, ಎಸ್ ಟಿ ಡಿ ಕೂಟ್ಟೂರರ ಲೈನ್, ಬೇವಿನ ಮರದಮ್ಮ, ಹುಲಿಗೆಮ್ಮ ಗುಡಿ ಲೈನ್, ರಹಮತ್ ನಗರ 4 ಭಾಗಗಳು, ಖಾನ ತೋಟ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು

ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಸರಕಾರದ ಆಡಳಿತ ವೈಫಲ್ಯ ಖಂಡಿಸಿ ಜೆಡಿಎಸ್ ವತಿಯಿಂದ ಪ್ರತಿಭಟನೆ

ಭ್ರಷ್ಟಾಚಾರವೇ ಕಾಂಗ್ರೆಸ್ ಸರಕಾರದ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರದ ಆಡಳಿತ ವೈಫಲ್ಯ, ಭ್ರಷ್ಟಾಚಾರ ಖಂಡಿಸಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ನೇತೃತ್ವದಲ್ಲಿ ಜೆಡಿಎಸ್ ಕಾರ್ಯಕರ್ತರು ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಇಲ್ಲಿನ ಹುಯಿಲಗೋಳ ನಾರಾಯಣರಾವ್ ವೃತ್ತದಿಂದ ಮಹಾತ್ಮ ಗಾಂಧಿ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಜೆಡಿಎಸ್ ಕಾರ್ಯಕರ್ತರು, ಕೆಲಕಾಲ ರಸ್ತೆ ತಡೆ ನಡೆಸಿ ರಾಜ್ಯ ಸರಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವೆಂಕನಗೌಡ ಗೋವಿಂದಗೌಡ್ರ, ರಾಜ್ಯ ಕಾಂಗ್ರೆಸ್ ಸರಕಾರ ಒಂದೇ ವರ್ಷದಲ್ಲಿ ಆಡಳಿತ ವೈಫಲ್ಯ ಕಂಡಿದೆ ಮತ್ತು ಭ್ರಷ್ಟಾಚಾರ ನಡೆಸಿದೆ ಎನ್ನುವುದಕ್ಕೆ ಮಾಜಿ ಸಚಿವ ನಾಗೇಂದ್ರ ಅವರನ್ನು ಇ.ಡಿ ಬಂಧಿಸಿರುವುದೇ ಸಾಕ್ಷಿ. ದಲಿತರ ಕಲ್ಯಾಣಕ್ಕೆ ಮೀಸಲಾಗಿದ್ದ 14 ಸಾವಿರ ಕೋಟಿ ರೂ. ಹಣ ದುರ್ಬಳಕೆ ಮಾಡಿಕೊಂಡಿರುವ ಕಾಂಗ್ರೆಸ್ ಸರಕಾರಕ್ಕೆ ದಲಿತರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.



ಗ್ಯಾರಂಟಿ ಕಾರ್ಯಕ್ರಮಗಳಿಗೆ ಪೆಟ್ರೋಲ್ ಮತ್ತು ಡಿಸೇಲ್ ಸಹಿತ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದರು. ಗ್ಯಾರಂಟಿ ಹೆಸರಿನಲ್ಲಿ ರೈತರಿಗೆ ನೀಡಲಾಗುತ್ತಿದ್ದ ಸಹಾಯಧನ, ವಿದ್ಯಾರ್ಥಿ ವೇತನವನ್ನು ತಡೆಹಿಡಿದರು. ಯಾವುದೇ ಜನಪರ ಕಾರ್ಯಕ್ರಮಗಳನ್ನು ನೀಡದೆ ರಾಜ್ಯದ ಬೊಕ್ಕಸವನ್ನು ಖಾಲಿ ಮಾಡಿದ್ದೇ ಕಾಂಗ್ರೆಸ್ ಸರಕಾರದ ಒಂದು ವರ್ಷದ ಸಾಧನೆಯಾಗಿದೆ ಎಂದು ಆಪಾದಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಪದಾಧಿಕಾರಿಗಳಾದ ಬಸವರಾಜ ಅಪ್ಪಣ್ಣವರ, ಪ್ರಫುಲ್ ಪುಣೇಕರ, ಮಲ್ಲಿಕಾರ್ಜುನ ಪರ್ತಗೌಡ್ರ, ಮಂಜುಳಾ ಮೇಟಿ, ವೀರಪ್ಪ ಜಿರ್ಲಿ, ಡಾ. ಶರಣಪ್ಪ ಹೂಗಾರ, ಕೆ.ಎಚ್. ಕೊಳ್ಳಿಮಠ, ಮರಿಯಪ್ಪ ಬಳ್ಳಾರಿ, ಹಾಜಿಅಲಿ ಕೊಪ್ಪಳ, ತಿಪ್ಪಣ್ಣ ಹುಡೇದ, ಅಮರೇಶ ಅಂಗಡಿ, ಕುಮಾರ ಜಿಗಳೂರ, ಸುಪ್ರಿತ್ ಬಾಗಲಕೋಟ, ಸುನೀಲ ಹುಬ್ಬಳ್ಳಿ, ಯಲ್ಲಪ್ಪ ಹೂಗಾರ, ಯಲ್ಲಪ್ಪ ಹೊಂಬಳ ಇತರರು ಉಪಸ್ಥಿತರಿದ್ದರು.

> ಕಾರ್ಯಾಂಗದ ಪ್ರಮುಖ ಭಾಗವಾಗಿರುವ ಸರಕಾರಿ ನೌಕರರ ವೇತನ ಪರಿಷ್ಕರಣೆ ಸೇರಿದಂತೆ 7ನೇ ವೇತನ ಆಯೋಗದ ವರದಿ ಸಲ್ಲಿಕೆಯಾದರೂ ಸರಕಾರಿ ನೌಕರರ ನ್ಯಾಯಯುತ ಬೇಡಿಕೆ ಈಡೇರಿಸಲು ಕಾಂಗ್ರೆಸ್ ಸರಕಾರಕ್ಕೆ ಸಾಧ್ಯವಾಗಿಲ್ಲ. ಇಂಥ ಭ್ರಷ್ಟ ಸರಕಾರವನ್ನು ರಾಜ್ಯಪಾಲರು ವಜಾಗೊಳಿಸಬೇಕು ಎಂದು ಗೋವಿಂದಗೌಡ್ರ ಒತ್ತಾಯಿಸಿದರು.

ಎಬಿವಿಪಿ ಕಾರ್ಯಕರ್ತರಿಂದ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹಾಸ್ಟೆಲ್ ಸೌಲಭ್ಯ ನೀಡಬೇಕು ಮತ್ತು ಹಾಸ್ಟೆಲ್ ಆಯ್ಕೆ ಪ್ರಕ್ರಿಯೆ ತ್ವರಿತಗತಿಯಲ್ಲಿ ನಡೆಸಬೇಕು ಎಂದು ಒತ್ತಾಯಿಸಿ ಎಬಿವಿಪಿ ಕಾರ್ಯಕರ್ತರು ಕಾಟನ್ ಸೇಲ್ ಸೊಸೈಟಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿ ಹೊಂದಿರುವ ಕಾಟನ್ ಸೇಲ್ ಸೊಸೈಟಿ ಎದುರು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದರು. ಈ ವೇಳೆ ಇಬ್ಬರು ವಿದ್ಯಾರ್ಥಿ ಮುಖಂಡರನ್ನು ಪೊಲೀಸರು ವಶಕ್ಕೆ ಪಡೆಯುತ್ತಿದ್ದಂತೆ ಪ್ರತಿಭಟನಾಕಾರರು ಆಕ್ರೋಶಗೊಂಡರು. ವಶಕ್ಕೆ ಪಡೆದ ಮುಖಂಡರನ್ನು ಬಿಡುಗಡೆ ಮಾಡಿದ ನಂತರವೇ ಮನವಿ ಸಲ್ಲಿಸಲಾಗುವುದು ಎಂದು ಪಟ್ಟು ಹಿಡಿದರು.

ಈ ವೇಳೆ ಸ್ಥಳಕ್ಕೆ ಆಗಮಿಸಿದ ಸಚಿವ ಎಚ್.ಕೆ. ಪಾಟೀಲ, ವಿದ್ಯಾರ್ಥಿ ಮುಖಂಡರನ್ನು ಬಿಡುಗಡೆ ಮಾಡುವಂತೆ ಪೊಲೀಸರಿಗೆ ಸೂಚನೆ ನೀಡಿದ ನಂತರ ಅವರನ್ನು ಬಿಡುಗಡೆ ಮಾಡಲಾಯಿತು. ನಂತರ ವಿದ್ಯಾರ್ಥಿಗಳು ತಮ್ಮ ಬೇಡಿಕೆಯ ಮನವಿ ಪತ್ರವನ್ನು ಸಲ್ಲಿಸಿದರು.

ವಿದ್ಯಾರ್ಥಿಗಳ ಶಾಲಾ-ಕಾಲೇಜು ಸಮಯದಲ್ಲಿ ಬಸ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಬೇಕು. ವಿದ್ಯಾರ್ಥಿ ವೇತನವನ್ನು ತಕ್ಷಣ ಬಿಡುಗಡೆಗೊಳಿಸಬೇಕು. ರಾಜ್ಯದ ಎಲ್ಲ ವಿಶ್ವ ವಿದ್ಯಾಲಯಗಳಿಗೆ ಏಕರೂಪ ಶೈಕ್ಷಣಿಕ ವೇಳಾಪಟ್ಟಿ ಜಾರಿ ಮಾಡಬೇಕು. ಬಸ್ ಪಾಸ್ ವಿತರಣೆ ಸರಿಯಾಗಿ ಮಾಡಬೇಕು. ಹಾಸ್ಟೆಲ್‌ಗಳ ಮೂಲಭೂತ ಸೌಲಭ್ಯಕ್ಕೆ ಆದ್ಯತೆ ನೀಡಬೇಕು ಎನ್ನುವ ಮನವಿಯನ್ನು ಸಚಿವರಿಗೆ ಸಲ್ಲಿಸಿದರು.

ಸಂಸದ ಬಸವರಾಜ ಬೊಮ್ಮಾಯಿ ಅವರಿಂದ ಧನ್ಯವಾದ ಯಾತ್ರೆ

ಚುನಾವಣೆಗೂ ಈ ಯಾತ್ರೆಗೂ ಸಂಬಂಧವಿಲ್ಲ

■ ವಿಜಯಸಾಕ್ಷಿ ಸುದ್ದಿ, ಶಿಗ್ಗಾವಿ

ಶಿಗ್ಗಾವಿ-ಸವಣೂರು ಕ್ಷೇತ್ರದ ಜನತೆಗೆ ಧನ್ಯವಾದ ಯಾತ್ರೆ ಆರಂಭಿಸಿದ್ದು, ಇದು ಯಾವುದೇ ರಾಜಕೀಯ ಯಾತ್ರೆಯಲ್ಲ. ಮುಂದಿನ ಚುನಾವಣೆಗೂ ಈ ಯಾತ್ರೆಗೂ ಸಂಬಂಧವಿಲ್ಲ. ನಮ್ಮ-ನಿಮ್ಮ ನಡುವಿನ ಅವಿನಾಭಾವ ಸಂಬಂಧವನ್ನು ಶಾಶ್ವತಗೊಳಿಸಲು ಈ ಯಾತ್ರೆ ಮಾಡುತ್ತಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಶಿಗ್ಗಾವಿ ಹಾಗೂ ಸವಣೂರು ವಿಧಾನಸಭಾ ಕ್ಷೇತ್ರದ ಮುತ್ತಳ್ಳಿ, ತಡಸ, ಅಡವಿ ಸೋಮಾಪುರ, ಕುನ್ನೂರು, ಶ್ಯಾಡಂಬಿ, ಮಡಿ ಗ್ರಾಮಗಳಲ್ಲಿ ಶುಕ್ರವಾರ ಆರಂಭಿಸಿರುವ ಧನ್ಯವಾದ ಯಾತ್ರೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ನಾನು ಶಾಸಕನಾಗಿಯೇ ನಿಮ್ಮ ಸೇವೆ ಮಾಡಬೇಕೆಂದೇನಿಲ್ಲ. ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ನಾನು ಹಾವೇರಿ ಗದಗ ಕ್ಷೇತ್ರದ ಸಂಸದನಾಗಿದ್ದು, ಈ ಕ್ಷೇತ್ರದ ಅಭಿವೃದ್ಧಿ ಹಾಗೂ ನಿಮ್ಮ ವಯಕ್ತಿಕ ಕೆಲಸಗಳನ್ನು ಮಾಡಲು ನಾನು ಸದಾ ಸಿದ್ಧನಿದ್ದೇನೆ. ನಾನು ಶಾಸಕನಲ್ಲದಿದ್ದರೂ ನಿಮ್ಮ ಸೇವೆ ಮಾಡಲು ಅದಕ್ಕಿಂತ ಹೆಚ್ಚಿನ ಶಕ್ತಿಯನ್ನು ನೀವು ನನಗೆ ನೀಡಿದ್ದೀರಿ ಎಂದು ಹೇಳಿದರು.

ದೊಡ್ಡ ಪ್ರಮಾಣದ ಅಭಿವೃದ್ಧಿಯಾಗಬೇಕೆಂಬ ಪರಿಕಲ್ಪನೆ ನನ್ನದಾಗಿತ್ತು. ವಾಣಿಜ್ಯಕವಾಗಿ, ಶೈಕ್ಷಣಿಕವಾಗಿ ತಡಸ ಗ್ರಾಮ ಅಭಿವೃದ್ಧಿಯಾಗಬೇಕೆಂಬ ಬಯಕೆ ನನ್ನದಾಗಿದೆ. ಪ್ರಗತಿಯೆಂಬುದು ನಿರಂತರ ನಡೆಯುವ ಪ್ರಕ್ರಿಯೆ. ತಡಸ ಗ್ರಾಮದಲ್ಲಿ ಎಲ್ಲ ಸಮುದಾಯದ ಜನರಿದ್ದಾರೆ. ಆವರೆಲ್ಲರೂ ನಮ್ಮವರು ಎಂದು ನನಗೆ ಬೆಂಬಲ ಕೊಟ್ಟಿದ್ದಾರೆ. ಪ್ರತಿಬಾರಿ ಚುನಾವಣೆಯಲ್ಲಿ ಮತ ಎಣಿಕೆ ತಡಸ ಹಾಗೂ ಮುತ್ತಳ್ಳಿ ಗ್ರಾಮದಿಂದ ಆರಂಭವಾಗುತ್ತದೆ. ಈ ಭಾಗದ ಜನರು ಕೇವಲ ಮತಗಳಷ್ಟೇ ಅಲ್ಲದೆ ಅತ್ಮಸ್ಥೈರ್ಯವನ್ನೂ ನನಗೆ ನೀಡಿದ್ದಾರೆ. ನಾನು ನಿಮ್ಮನ್ನು ಎಂದೂ ಮರೆಯಲು ಸಾಧ್ಯವಿಲ್ಲ ಎಂದರು.

ಬರುವ ದಿನಗಳಲ್ಲಿ ಈ ಅಭಿವೃದ್ಧಿಯ ವೇಗ ಇನ್ನಷ್ಟು ಹೆಚ್ಚಾಗಬೇಕು. ಹಿಂದುಳಿದ ತಾಲೂಕು ಎಂಬ ಹಣೆಪಟ್ಟಿಯಿಂದ ಮುಂದುವರೆಯುತ್ತಿರುವ ತಾಲೂಕು ಎಂದು ಬದಲಾಯಿಸಲಾಗಿದೆ. ವರದಾ ನದಿಯಿಂದ ತಡಸದ ಕೆರೆಗೆ ನೀರು ಹರಿಸುವ ಕುರಿತು ನಮ್ಮ ಹಿರಿಯರು ಯಾರೂ ಯೋಚನೆ ಮಾಡಿರಲಿಲ್ಲ. ಯಾವುದು ಅಸಾಧ್ಯವಾಗಿತ್ತೋ ಅದನ್ನು ನಾನು ಮಾಡಿ ತೋರಿಸಿದ್ದೇನೆ. ಮುಂದಿನ ದಿನಗಳಲ್ಲಿ ಅಭಿವೃದ್ಧಿಯ ಬಗ್ಗೆ ಕಳಕಳಿ ಇಟುಕೊಂಡು ಯಾವಾಗಲೂ ಕೂಡ ನನ್ನ ಬಳಿ ಬರಬಹುದು ಎಂದರು.

> ತಡಸ್ ಗ್ರಾಮ ಮೂರು ತಾಲೂಕುಗಳ ಕೇಂದ್ರ ಬಿಂದುವಾಗಿದೆ. ಈ ಗ್ರಾಮಕ್ಕೆ ಕುಡಿಯುವ ನೀರಿನ ಸಮಸ್ಯೆ, ವಿದ್ಯುತ್ ಸಮಸ್ಯೆ ಕಾಡುತ್ತಿತ್ತು. ದೊಡ್ಡ ಮಳೆಯಾದರೆ ಮನೆಯೊಳಗೆ ನೀರು ಬರುತ್ತಿತ್ತು. ಈ ಎಲ್ಲ ಸಮಸ್ಯೆಗಳನ್ನು ಬಗೆಹರಿಸಿ ಊರಿಗೆ ಬಸ್ ನಿಲ್ದಾಣ, ಹೈಸ್ಕೂಲು, ಕಾಲೇಜು ಎಲ್ಲವನ್ನೂ ನಿಮ್ಮ ಸಹಕಾರದಿಂದ ಮಾಡಲು ಸಾಧ್ಯವಾಗಿದೆ ಎಂದು ಹೇಳಿದರು.

ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

ಸಂಪಾದಕೀಯ

ದೆಹಲಿಯತ್ತ ರೈತ ಮೋರ್ಚಾ

ಕೃಷಿ ಉತ್ಪನ್ನಗಳ ಕನಿಷ್ಠ ಬೆಂಬಲ ಬೆಲೆ, ಸಾಲಮನ್ನಾ, ಕೃಷಿ ಚಟುವಟಿಕೆಗೆ ಪ್ರತ್ಯೇಕ ಬಜೆಟ್ ಸೇರಿದಂತೆ ರೈತರ ಹಲವಾರು ಬೇಡಿಕೆ ಈಡೇರಿಕೆಗಾಗಿ ವರ್ಷಗಳ ಹಿಂದೆ ನಡೆದ ರೈತ ಹೋರಾಟ ಕೋಲಾಹಲವನ್ನೆ ಸೃಷ್ಟಿಸಿತ್ತು. ಸಹಸ್ರ ಸಹಸ್ರ ಸಂಖ್ಯೆಯಲ್ಲಿ ರೈತರು ದೆಹಲಿಯತ್ತ ದೌಡಾಯಿಸಿದ, ಪ್ರಭುತ್ವಕ್ಕೆ ಚಾಟೀ ಬೀಸಿದ್ದು ಇನ್ನು ಹಚ್ಚು ಹಸಿರಾಗಿದೆ. ಈಗ ಅಂಥದ್ದೆ ಮತ್ತೊಂದು ಹೋರಾಟ ರೂಪಗೊಳ್ಳುವುದು ನಿಶ್ಚಿತವಾಗಿದೆ.

ದೆಹಲಿ ರೈತರ ಹೋರಾಟದ ಪ್ರಮುಖ ನೇತೃತ್ವ ವಹಿಸಿದ್ದ ಸಂಯುಕ್ತ ಕಿಸಾನ್ ಮೋರ್ಚಾ, ಮತ್ತೊಮ್ಮೆ ರೈತರ ಬೇಡಿಕೆ ಈಡೇರಿಕೆಗಾಗಿ ಹೋರಾಟ ಆರಂಭಿಸುವ ನಿರ್ಧಾರ ಕೈಗೊಂಡಿದೆ. ಆದರೆ ಈ ಬಾರಿ ರೈತರು ದೆಹಲಿಗೆ ಮುತ್ತಿಗೆ ಹಾಕುತ್ತಾರೊ ಇಲ್ಲವೋ ಎನ್ನುವ ಕುರಿತು ಸ್ಪಷ್ಟ ನಿರ್ಧಾರ ಕೈಗೊಂಡಿಲ್ಲ. ಸದ್ಯಕ್ಕೆ ಮುತ್ತಿಗೆ ಹಾಕದಿರಲು ರೈತರು ನಿರ್ಧಾರಿಸಿದ್ದಾರೆ. ಆದರೆ ಪ್ರತಿಭಟನೆಯನ್ನು ಮಾತ್ರ ಗಂಭೀರವಾಗಿ ಪರಿಗಣಿಸುವ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಹೋರಾಟದ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ದೇಶದ ಎಲ್ಲ ಸಂಸದರಿಗೂ ಆಯಾ ಪ್ರದೇಶದ ರೈತ ಸಂಘಟನೆಗಳು ಮನವಿ ಸಲ್ಲಿಸಿ, ಬೇಡಿಕೆ ಈಡೇರಿಸುವಂತೆ ಒತ್ತಡ ಹಾಕುವ ನಿರ್ಧಾರಕ್ಕೆ ಸಂಯುಕ್ತ ಕಿಸಾನ್ ಮೋರ್ಚಾ ಮುಂದಾಗಿದೆ. ಇಷ್ಟು ಮಾತ್ರವಲ್ಲದೇ ದೇಶದ ವಿವಿಧ ರಾಜ್ಯಗಳಲ್ಲಿ ನಡೆಯಲಿರುವ ವಿಧಾನಸಭೆ ಚುನಾವಣೆ ವೇಳೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಿ, ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಎನ್ ಡಿಎ ಸರಕಾರಕ್ಕೆ ಬಿಸಿ ಮುಟ್ಟಿಸಲಿದೆ.

ಸಂಯುಕ್ತ ಕಿಸಾನ್ ಮೋರ್ಚಾ ಬೇಡಿಕೆಗಳ ಪೈಕಿ ಕೆಲವು ಬೇಡಿಕೆ ಈಡೇರಿಸುವುದು ಕಷ್ಟಸಾಧ್ಯವಾದರೂ ಕೃಷಿ ಉತ್ಪನ್ನಗಳ ಕನಿಷ್ಠ ಬೆಂಬಲ ಬೆಲೆ ಕಾನೂನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಆ ಕಾನೂನು ಅನ್ನದಾತನ ಬದುಕಿನಲ್ಲಿ ಬಹುದೊಡ್ಡ ಬದಲಾವಣೆ ತರಲಿದೆ. ರೈತರು ತಾವು ಬೆಳೆದ ಬೆಳೆಗೆ ವೈಜ್ಞಾನಿಕ ರೀತಿಯಲ್ಲಿ ಬೆಲೆ ದೊರೆಕಿದಾಗ ಮಾತ್ರ ರೈತರು ಕೃಷಿಯಲ್ಲಿಯೇ ಮುಂದುವರಿಯುವುದಕ್ಕೆ ಪ್ರೇರಣೆ ಸಿಗಲಿದೆ. ರೈತನಿಗೆ ಕೃಷಿ ಲಾಭದಾಯಕ ಉದ್ಯಮವಾಗಿ ಕಾಣುವಂಥ ವಾತಾವರಣವನ್ನು ಸರಕಾರ ಸೃಷ್ಟಿಸಬೇಕು. ಅಂದಾಗ ಮಾತ್ರ ಭವಿಷ್ಯದಲ್ಲಿ ಆಹಾರ ಭದ್ರತೆ ಕಾಪಾಡಿಕೊಳ್ಳಲು ಸಾಧ್ಯವಾಗಲಿದೆ. ನಮ್ಮದು ಕೃಷಿ ಪ್ರಧಾನ ದೇಶ. ಕೃಷಿಗಾಗಿ ನಮ್ಮ ಸರಕಾರದ ಆದ್ಯತೆಯೂ ಪ್ರಧಾನವಾಗಿ ಸಿಗಬೇಕು.

ವೀರಶೈವ ಲಿಂಗಾಯತ ಮಹಾಸಭಾ; ಮಹೇಶ ಕೋಟಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ತಾಲೂಕಾ ಘಟಕದ ಚುನಾವಣೆಯಲ್ಲಿ ಮಹೇಶ ಚಂದ್ರಶೇಖರಪ್ಪ ಕೋಟಿ ಗದಗ ತಾಲೂಕಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ತಾಲೂಕಾಧ್ಯಕ್ಷ ಸ್ಥಾನಕ್ಕೆ ಮಹೇಶ ಕೋಟಿ ಸೇರಿದಂತೆ ಚನ್ನಬಸಪ್ಪ ಅಕ್ಕಿ ಹಾಗೂ ಮೋಹನ ದೊಡ್ಡಕುಂಡಿ ನಾಮಪತ್ರ ಸಲ್ಲಿಸಿದ್ದರು. ಅವಿರೋಧ ಆಯ್ಕೆಗೆ ಹಿರಿಯ ಸಮಕ್ಷಮ ನಡೆದ ಸೌಹಾರ್ದ ಚರ್ಚೆಯಲ್ಲಿ ಎರಡು ಅವಧಿಯನ್ನು ನಿಗದಿಗೊಳಿಸಿ ಮಹೇಶ ಕೋಟಿ ಅವರನ್ನು ಮೊದಲ ಅವಧಿಗೆ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.

ಉಪಾಧ್ಯಕ್ಷರನ್ನಾಗಿ ಚನ್ನಬಸಪ್ಪ ಅಕ್ಕಿ ಹಾಗೂ ಮೋಹನ ದೊಡ್ಡಕುಂಡಿ ಅವರನ್ನು ಕಾರ್ಯಕಾರಿ ಮಂಡಳಿ ಸದಸ್ಯರನ್ನಾಗಿ ಮಾಡಲು ನಿರ್ಧರಿಸಲಾಯಿತು. ಮಹೇಶ ಕೋಟಿ ಅವರು ಮಹಾಸಭಾದ ಜಿಲ್ಲಾ ಕೋಶಾಧ್ಯಕ್ಷರಾಗಿ, ಕೃತಪುರ ಅರ್ಬನ್ ಸೌಹಾರ್ದ ಸಹಕಾರಿ ನಿ. ಗದಗ ಇದರ ಹಾಲಿ ಅಧ್ಯಕ್ಷರಾಗಿ, ಪ್ರಾಣಿ ದಯಾ ಸಂಘದ ಅಧ್ಯಕ್ಷರಾಗಿ, ಶ್ರೀ ಮಹಾವೀರ ಗೋ ಸೇವಾ ಸಮಿತಿಯ ಸಂಸ್ಥಾಪಕ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿ, ಸದ್ಯ ಟ್ರಸ್ಟಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ವಿಡಿಎಸ್ ಶಾಲೆಯ ಶಾಲಾ ಸಂಸತ್ ರಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ವಿ.ಡಿ.ಎಸ್. ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶಾಲಾ ಸಂಸತ್ತು ಚುನಾವಣೆಯನ್ನು ರಚಿಸಲಾಯಿತು. ಚುನಾವಣಾ ಅಧಿಕಾರಿಗಳಾಗಿ ಶೈಕ್ಷಣಿಕ ಮಾರ್ಗದರ್ಶಿ ಪ್ರತೀಕ ಎಸ್.ಹುಯಿಲಗೋಳ ಹಾಗೂ ಮುಖ್ಯೋಪಾಧ್ಯಾಯರಾದ ಎಮ್.ಆರ್. ಡೊಳ್ಳಿನ ವಹಿಸಿಕೊಂಡಿದ್ದರು.

ಮತಗಟ್ಟೆ ಅಧಿಕಾರಿಗಳಾಗಿ ಶಿಕ್ಷಕಿ ರೇಣುಕಾ ವೆಂಕಟಾಪುರ ಹಾಗೂ ಗಾಯಿತ್ರಿ ಜಿ.ಅಸುಂಡಿಕಾರ್ಯ ನಿರ್ವಹಿಸಿದರು. ಪಿಆರ್‌ಓ ಆಗಿ ಸುಮಂಗಲಾ ಆಸಂಗಿ ಹಾಗೂ ಪಾರ್ವತಿ ಕಟ್ಟಿಮನಿ, ಎಪಿಆರ್‌ಓ ಅಶ್ವಿನಿ ಜೋಶಿ ಹಾಗೂ ಅನ್ನಪೂರ್ಣ ಹೊನ್ನಣವರ, ಪರಿಶೀಲನಾಧಿಕಾರಿಗಳಾಗಿ ಅಫೀಜಾಬೆಗಂ ಬಾಗಲಕೋಟಿ, ತಾಂತ್ರಿಕ ಸಲಹೆಗಾರರಾಗಿ ಸಭಾ ಉಮಚಗಿ ಮತ್ತು ಅನಜುಮ ತಹಸೀಲದಾರ ಇದ್ದರು.

ಅರ್ಚನಾ ಗಿರಿತಿಮ್ಮನವರ, ಶ್ವೇತಾ ಮೇಲಗಿರಿ, ಪದ್ಮಾವತಿ ಬಳ್ಳಾರಿ, ಶಾಹೀನತಾಜ ಮಣ್ಣೂರ, ಪ್ರಭಾವತಿ ಹಿರೇಮಠ, ರೇಖಾ ಬಡಿಗೇರ, ವೀಣಾ ಹುಬ್ಬಳ್ಳಿ, ಗೋಪಾಲ ನರಗುಂದ, ರಾಘವೇಂದ್ರ ಎಂ.ಆರಿ, ವಿರೇಶ ಮುಂತಾದವರು ವಿವಿಧ ಜವಾಬ್ದಾರಿಗಳನ್ನು ನಿಭಾಯಿಸಿದರು. ಮತ ಎಣಿಕೆ ಕಾರ್ಯ ಪೂರ್ಣಗೊಂಡ ನಂತರ ಅತೀ ಹೆಚ್ಚು ಮತ ಪಡೆದು ಆಯ್ಕೆಯಾದ ಅಭ್ಯರ್ಥಿಗಳಿಗೆ ಪ್ರಮಾಣ ವಚನವನ್ನು ಭೋದಿಸಿ ಖಾತೆಗಳನ್ನು ಹಂಚಿಕೆ ಮಾಡಲಾಯಿತು.

ಪುಸ್ತಕ ಪರಿಚಯ

ಮರಳು ಮಾಡುವ ಮರುಳಸಿದ್ಧಪ್ಪನ ಶಾಯರಿಗಳು

'ಎದೆಯಾಗಿನ ಮಾತು'

ಮನುಷ್ಯನ ಮನಸ್ಸಿನಲ್ಲಿ ಭಾವನೆಗಳ ತಾಕಲಾಟ ಸದಾಕಾಲ ನಡೆದೇ ಇರುತ್ತದೆ. ಈ ತಾಕಲಾಟಗಳನ್ನು ಕೆಲವರು ತಮ್ಮಲ್ಲಿಯೆ ಅದುಮಿಟ್ಟುಕೊಂಡರೆ, ಇನ್ನು ಕೆಲವರು ಅವುಗಳಿಗೆ ಅಕ್ಷರ ರೂಪ ನೀಡಿ ಅವುಗಳನ್ನು ಕತೆ, ಕವನ, ಚುಟುಕ, ನಾಟಕ ಇತ್ಯಾದಿಗಳ ಮೂಲಕ ಹೊರ ಹಾಕುತ್ತಾರೆ. ಈ ಗುಂಪಿಗೆ ಸೇರುವ ಇನ್ನೊಂದು ಬಗೆಯೆಂದರೆ ಅದು ಶಾಯರಿ.

ಮೂಲತಃ ಉರ್ದು ಭಾಷೆಯಿಂದ ಜನಿಸಿರುವ ಈ ಶಾಯರಿ ಲೋಕ ಕನ್ನಡದಲ್ಲಿಯೂ ಸಾಕಷ್ಟು ಪ್ರಭಾವ ಬೀರಿದೆ. ಇಟಗಿ ಈರಣ್ಣನಂಥವರು ಕನ್ನಡದ ಶಾಯರಿ ಲೋಕದಲ್ಲಿ ತಮ್ಮ ಛಾಪನ್ನು ಈಗಾಗಲೇ ಮೂಡಿಸಿದ್ದಾರೆ. ಅವರ ಹಾದಿಯಲ್ಲಿ ಸಾಗಿರುವ ಹುಲಕೋಟಿಯ ಮರುಳಸಿದ್ಧಪ್ಪ ತಮ್ಮ ಶಾಯರಿಗಳ ಮೂಲಕ ಗಮನ ಸೆಳೆಯುತ್ತಿದ್ದಾರೆ.

ಮರುಳಸಿದ್ಧಪ್ಪನವರು ಈ ನಾಡಿನಲ್ಲಿ ಈಗಾಗಲೇ ಶಾಯರಿ ಕವಿ ಎಂದು ಹೆಸರಾದವರು. ಜೀವವಿಮಾ ಪ್ರತಿನಿಧಿಯಾಗಿರುವ ಇವರು, ಜೀವಿಗಳ ಮನದಲ್ಲಿ ಭಾವನೆಯ ಅಲೆಗಳನ್ನು ತಮ್ಮ ಶಾಯರಿಗಳ ಮೂಲಕ ಹುಟ್ಟು ಹಾಕುವಲ್ಲಿ ಯಶಸ್ವಿಯಾಗಿದ್ದಾರೆ. 'ಎದೆಯಾಗಿನ ಮಾತು' ಎನ್ನುವ ಅವರ ಎರಡನೆ ಶಾಯರಿಗಳ ಸಂಕಲನ ಓದಲು ಒಮ್ಮೆ ಕೈಗೆ ಸಿಕ್ಕರೆ ಕೆಳಗಿಡದಂತೆ ವೈವಿಧ್ಯ ಭಾವನೆಗಳ ಮೋಡವನ್ನೇ ಮನದ ತುಂಬಾ ಬಿತ್ತುತ್ತ ಹೋಗುತ್ತದೆ.



'ಎದೆಯಾಗಿನ ಮಾತು' ಶಾಯರಿಗಳ ಸಂಕಲನ
ಲೇ: ಮರುಳಸಿದ್ದಪ್ಪ ದೊಡ್ಡಮನಿ
ಪುಟಗಳು: 64, ಬೆಲೆ: 100ರೂ.
ಪ್ರಕಾಶನ–ಪ್ರಜ್ವಲ ಪ್ರಕಾಶನ ಹುಲಕೋಟಿ.

ವರಕವಿ ಬೇಂದ್ರೆ ಹೇಳುತ್ತಾರೆ– ಹಚ್ಚುವದಿದ್ದರೆ ಪ್ರೀತಿಯ ಒಲೆ ಹಚ್ಚು ಆದರೆ ಎಂದಿಗೂ ಬೆಂಕಿಯನ್ನು ಹಚ್ಚಬೇಡ ಎಂದು. ಮರುಳಸಿದ್ಧಪ್ಪನವರು ಅದೇ ಧಾಟಿಯಲ್ಲಿ ಬರೆದ ಶಾಯರಿ 'ಹಚ್ಚುವ ಮನಸಿದ್ರ ಪ್ರೀತಿ ಹಂಚುವ ದೀಪಾ ಹಚ್ಚು, ಬ್ಯಾರೇರ ಎದಿಯಾಗ ಬೆಂಕಿ ಹಚ್ಚಬ್ಯಾಡ' ಎನ್ನುವಲ್ಲಿ ಅವರ ಜೀವನ ಪ್ರೀತಿ ಎದ್ದು ಕಾಣಿಸುತ್ತದೆ. ಕತೆ, ಕಾದಂಬರಿಗಳಿಗೆ, ಕವನಗಳಿಗೆ ಮೂಲ ಸೆಲೆ ಪ್ರೀತಿಯಾಗಿರುವಂತೆ ಶಾಯರಿಗಳ ಲೋಕದಲ್ಲಿಯೂ ಪ್ರೀತಿ ತಾನೇತಾನಾಗಿ ವಿಜೃಂಭಿಸುತ್ತದೆ. ಇದಕ್ಕೆ ಪುಷ್ಟಿ ಕೊಡುವ ಅನೇಕ ಶಾಯರಿಗಳನ್ನು ಮರುಳಸಿದ್ಧಪ್ಪ ಸಾಕಷ್ಟು ಬರೆದಿದ್ದಾರೆ.

ಮರುಳಸಿದ್ದಪ್ಪನ ಕಾವ್ಯ ಮನಸ್ಸಿಗೆ ಹಿಡಿಸುವುದು ಅದರ ದೇಸಿ ಸೊಗಡಿನಿಂದ. ಆಡು ಭಾಷೆಯಲ್ಲಿಯೆ ಶಾಯರಿಗಳನ್ನು ಬರೆಯುವ ಇವರ ಶಾಯರಿಗಳಲ್ಲಿ ಪ್ರೀತಿ, ಕರುಣೆ, ಕನವರಿಕೆ, ವಾದ–ವಿವಾದ ಹೀಗೆ ಜೀವನದ ಅನೇಕ ಮಜಲುಗಳು ಹಾದು ಹೋಗುತ್ತವೆ. ಪ್ರೇಯಸಿಯ ಬಿಸಿಯುಸಿರು ಏನೆಲ್ಲವನ್ನೂ ಮಾಡಿಸುತ್ತದೆ ಎಂಬುದಕ್ಕೆ 'ನಿನ್ನ ಎದಿಯುಸಿರ ಬಿಸಿಗೆ ನಾ ಹೂವಿನಂಗ ಆಗಿನಿ ನಿನ್ನ ಮಧುರ ಮಾತಿಗೆ ಬೆಣ್ಣೆಯಂಗ ಕರಗಿನಿ ನಿನ್ನ ಚೆಲುವನೆಲ್ಲ ಎದಿಯಾಗ ಬೆಚ್ಚಗೆ ಕಾಪಿಟ್ಟು ಕಾಯಿತಿನಿ ಉಸಿರಿರುವ ತನಕ ನಿನ್ನ ಹೆಸರಿನ್ಯಾಗ ಬದುಕಿರತಿನಿ' ಶಾಯರಿಯ ಭಾವವು ಕವಿ ತನ್ನ ಮನದಾಕೆಯನ್ನು ಅದೆಷ್ಟು ಪ್ರೀತಿಸುತ್ತಾನೆ ಎಂಬುದನ್ನು ಹೇಳುತ್ತದೆ.

'ಮರುಳನ ಶಾಯರಿ ಲೋಕ' ಎಂಬ ಪ್ರಥಮ ಶಾಯರಿಗಳ ಸಂಕಲನದ ನಂತರ ಹೊರ ಬಂದಿರುವ ಈ ಶಾಯರಿ ಸಂಕಲನ ಕೇವಲ ಮರುಳಸಿದ್ಧಪ್ಪನ ಎದೆಯಾಗಿನ ಮಾತಾಗಿರದೆ ಓದುಗರೆಲ್ಲರ ಎದಯಾಗಿನ ಮಾತಾಗಿರುವುದಕ್ಕೇ ಗೆದ್ದಿದೆ. ಒಟ್ಟು 94 ಶಾಯರಿಗಳನ್ನು ಒಳಗೊಂಡಿರುವ ಈ ಶಾಯರಿ ಸಂಕಲನದಲ್ಲಿನ ಪ್ರತಿ ಶಾಯರಿಯನ್ನೂ ಓದಿದಾಗ ಒಂದೊಂದು ಭಾವ ಓದುಗನ ಎದೆಯಲ್ಲಿ ಹೊಮ್ಮುತ್ತದೆ. ಆದ್ದರಿಂದ ಈ ಸಂಕಲನಕ್ಕೆ ಎದೆಯಾಗಿನ ಮಾತು ಎನ್ನುವ ಹೆಸರನ್ನಿರಿಸಿರುವದು ಅತ್ಯಂತ ಸೂಕ್ತ ಎನ್ನಿಸಿದೆ.

ಮರುಳಸಿದ್ಧಪ್ಪನವರು ಇನ್ನು ಮುಂದಾದರೂ ತಮ್ಮ ಕೃತಿಗಳಲ್ಲಿನ ಮುದ್ರಣ ದೋಷಗಳ ಕಡೆಗೆ ಗಮನ ನೀಡಬೇಕಿರುವುದು ಅವಶ್ಯಕವಿದೆ. ಅಲ್ಲಲ್ಲಿ ಅಕ್ಷರಗಳು ಹಾರಿರುವುದು, ಪದಗಳೇ ಅಪದ್ಧವಾಗಿ ಮುದ್ರಣವಾಗಿರುವುದು ಓದುಗರ ಓದಿಗೆ ತೊಂದರೆ ನೀಡುತ್ತವೇನೋ ಎನ್ನುವ ಭಾವ ಮೂಡುತ್ತದೆ. ಇದನ್ನು ಸರಿಪಡಿಸಿಕೊಂಡರೆ ಇನ್ನೂ ಉತ್ತಮವಾದ ಕೃತಿಗಳನ್ನು ಮರುಳಸಿದ್ಧಪ್ಪನವರು ಓದುಗರಿಗೆ ನೀಡಬಹುದು. ಹಾಗಾಗಲಿ ಎಂಬುದು ಓದುಗರ ಹಾರೈಕೆ.

ತಮ್ಮ ಎದೆಯ ಮಾತುಗಳನ್ನು ಕೇವಲ ತಮ್ಮದಷ್ಟನ್ನೆ ಆಗಿರಿಸಿಕೊಳ್ಳದೆ ಎಲ್ಲರ ಎದೆಯ ಮಾತನ್ನಾಗಿರಿಸಿರುವುದು ಸಂಕಲನದ ಯಶಸ್ಸಿಗೆ ಕಾರಣವಾಗಿದೆ. ನೀವಿನ್ನೂ ಈ ಶಾಯರಿಗಳ ಸಂಕಲನವನ್ನು ಓದಿಲ್ಲವಾದರೆ ಒಮ್ಮೆ ಓದಿ ನೋಡಿ, ನಿಮ್ಮ ನಿಮ್ಮ ಭಾವಗಳ ಲೋಕದಲ್ಲಿ ತೇಲಾಡುತ್ತ ಸುಖವನ್ನೋ, ವಿರಹವನ್ನೋ ಅನುಭವಿಸಿ.

–ಅರುಣ ಬಿ.ಕುಲಕರ್ಣಿ.
ನರೇಗಲ್–ಕೋಡಿಕೊಪ್ಪ.

ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಶಿಕ್ಷಕರಿಗೆ ಪ್ರೇರಣಾ ಕಾರ್ಯಾಗಾರ

ಶಿಕ್ಷಕ ಬದಲಾವಣೆಯ ಹರಿಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ವೈಚಾರಿಕ ಮನೋಭಾವವನ್ನು ಬೆಳೆಸುವುದು ಹಾಗೂ ಕಲಿಕೆಯಲ್ಲಿ ಸಂತೋಷವನ್ನುಂಟುಮಾಡುವುದು ಶಿಕ್ಷಕರ ಕರ್ತವ್ಯವಾಗಿದ್ದು, ಶಿಕ್ಷಕರು ಬದಲಾವಣೆಯ ಹರಿಕಾರರು ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ನೇತಾರರಾಗಿದ್ದಾರೆ ಎಂದು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ನುಡಿದರು.

ಅವರು ನಗರದ ತೋಂಟದಾರ್ಯ ಕಲ್ಯಾಣಕೇಂದ್ರದಲ್ಲಿ ಗದಗ ಶಹರ ವಲಯದ ಸರ್ಕಾರಿ–ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರಿಗೆ ಆಯೋಜಿಸಲಾಗಿದ್ದ ಒಂದು ದಿನದ ಪ್ರೇರಣಾ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಕ್ಕಳನ್ನು ನಿರ್ದಿಷ್ಟ ಜ್ಞಾನ ಕೌಶಲ ಮತ್ತು ಮೌಲ್ಯಗಳೊಂದಿಗೆ ಸಜ್ಜುಗೊಳಿಸುವುದು, ಅವರಲ್ಲಿ ಸಾಮಾಜಿಕ ಕಾಳಜಿಯನ್ನು ಮೂಡಿಸುವುದು ಹಾಗೂ ಅವರು ನಿರ್ವಹಿಸುವ ಕಾರ್ಯದಲ್ಲಿ ಶ್ರೇಷ್ಠತೆಯನ್ನು ಸೇರಿಸುವುದು ಶಿಕ್ಷಣದ ನೀತಿಯಾಗಿದೆ. ಪ್ರತಿ ಶಿಕ್ಷಣ ಸಂಸ್ಥೆ ಅಥವಾ ಶಿಕ್ಷಕರು ಮುಂದಾಲೋಚನೆಯ ಕಾರ್ಯಸಾಧುವಾದ ಯೋಜನೆಯನ್ನು ಹೊಂದಿರಬೇಕಾಗುತ್ತದೆ. ಮಾಸಿಕ ಕಾರ್ಯಕ್ರಮ ಮುಂತಾದವುಗಳ ಕುರಿತು ಸಮಗ್ರ ಯೋಜನೆ ರೂಪಿಸಿಕೊಂಡು ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಕಾರ್ಯಪ್ರವೃತ್ತರಾಗಬೇಕು.

ಈ ಉದ್ದೇಶಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಶಾಲಾ ಶಿಕ್ಷಣ ಇಲಾಖೆ 2024–25ನೇ ಶೈಕ್ಷಣಿಕ ವರ್ಷವನ್ನು ಮಕ್ಕಳ ಶೈಕ್ಷಣಿಕ ಬಲವರ್ಧನೆ ವರ್ಷವೆಂದು ಘೋಷಿಸಿದೆ. ಇದನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುವಂತೆ ಸೂಚಿಸಿದೆ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ತಂಡವಾಗಿ ಕಾರ್ಯನಿರ್ವಹಿಸುವಂತೆ ಇನ್ನಷ್ಟು ಪ್ರೇರೇಪಿಸುವ ದೃಷ್ಟಿಯಿಂದ ಈ ಪ್ರೇರಣಾ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿ ಎಸ್.ಡಿ. ಕನವಳ್ಳಿ ಮಾತನಾಡಿ, ಪ್ರತಿ ಶಿಕ್ಷಕರು ಆಂತರಿಕ ಪ್ರೇರಣೆ ಹೊಂದಬೇಕು. ಎಲ್ಲರ ಉದ್ದೇಶ ತರಗತಿ ಕೋಣೆಯಲ್ಲಿ ಶಿಕ್ಷಣ ಕೊಡುವುದಾಗಿದೆ. ಆದರೆ ಯಾವ ಶಿಕ್ಷಕ ತರಗತಿ ಕೊಠಡಿಯೊಳಗೆ ಹೋದಾಗ ಮಕ್ಕಳ ಮುಖ ಅರಳುತ್ತದೆಯೋ, ಯಾವ ಶಿಕ್ಷಕರು ತರಗತಿಯಿಂದ ಹೊರಗೆ ಹೋದಾಗ ಮಕ್ಕಳಿಗೆ ಬೇಸರವಾಗುತ್ತದೆಯೋ ಅವರೇ ನಿಜವಾದ ಉತ್ತಮ ಶಿಕ್ಷಕರು ಎಂದರು.

ಅತಿಥಿಗಳಾಗಿ ಭಾಗವಹಿಸಿದ್ದ ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಶಾಲಾ–ಕಾಲೇಜುಗಳು ಇಂದಿನ ದಿನಮಾನದ ದೇವಾಲಯಗಳು. ಸರ್ಕಾರಿ ಶಾಲಾ ಶಿಕ್ಷಕರಿಗೆ ನೀಡುವ ತರಬೇತಿಗಳನ್ನು ಅನುದಾನಿತ ಶಾಲಾ ಶಿಕ್ಷಕರಿಗೂ ನೀಡಬೇಕಿದೆ. ಅಲ್ಲದೆ ಸರ್ಕಾರಿ ಶಾಲೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಿಸುವ ಹಾಗೆ ಅನುದಾನಿತ ಶಾಲೆಗಳಿಗೂ ಕೂಡ ಅತಿಥಿ ಶಿಕ್ಷಕರನ್ನು ಕೊಡುವ ಹಾಗೆ ಆಗಬೇಕೆಂದು ತಿಳಿಸಿದರು.

ವೇದಿಕೆ ಮೇಲೆ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವ್ಹಿ.ವ್ಹಿ ನಡುವಿನಮನಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಎಸ್.ಕೆ. ಮಂಗಳಗುಡ್ಡ, ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಶರಣಪ್ಪ ನಾಗರಳ್ಳಿ, ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಪಿ.ಎಚ್. ಕಡಿವಾಲ, ಸದಸ್ಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಿ.ಆರ್.ಪಿ, ಬಿ.ಆರ್.ಪಿ ಹಾಗೂ ಇ.ಸಿ.ಓ, ಬಿ.ಐ.ಇ.ಆರ್.ಟಿ ಹಾಜರಿದ್ದರು.

ಬಿ.ಆರ್.ಪಿ ಶಾಮ ಲಾಂಡೆ ಸ್ವಾಗತಿಸಿದರೆ, ಬಿ.ಆರ್.ಪಿ ಪ್ರಕಾಶ ಮಂಗಳೂರ ನಿರೂಪಿಸಿದರು. ಸಿ.ಆರ್.ಪಿ ರವಿ ಹೆಬ್ಬಳ್ಳಿ ವಂದಿಸಿದರು. ಅನುದಾನಿತ,

'ಸಿದ್ಧಾಂತ ಶಿಖಾಮಣಿ' ಆಧ್ಯಾತ್ಮಿಕ ಪ್ರವಚನ ಮಂಗಲೋತ್ಸವ ಕಾರ್ಯಕ್ರಮದಲ್ಲಿ ಕಾಶೀ ಜಗದ್ಗುರುಗಳು

ಭಾವದಲ್ಲಿ ಬೆರೆತಷ್ಟು ಪುಣ್ಯ ಪ್ರಾಪ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಷ್ಟಲಿಂಗ ಪೂಜೆಯನ್ನು ಬಹಿರಂಗವಾಗಿ, ವೈಭವಯುತವಾಗಿ ಆಚರಿಸಿಕೊಂಡು ಬರುವಲ್ಲಿ ರಂಭಾಪುರಿ ಪೀಠದ ವೀರಗಂದಾಧರ ಜಗದ್ಗುರುಗಳು ಪ್ರಮುಖ ಕಾರಣೀಕರ್ತರು ಎಂದು ಕಾಶೀ ಪೀಠದ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯರು ಹೇಳಿದರು.

ನಗರದ ಎಪಿಎಂಸಿ ಆವರಣದಲ್ಲಿರುವ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಜಗದ್ಗುರು ಪಂಚಾಚಾರ್ಯ ಸೇವಾ ಸಂಘ, ಜಗದ್ಗುರು ವಿಶ್ವಾರಾಧ್ಯ ಜನಕಲ್ಯಾಣ ಪ್ರತಿಷ್ಠಾನ ಹಾಗೂ ಜಗದ್ಗುರು ವಿಶ್ವಾರಾಧ್ಯ ಎಜುಕೇಶನಲ್ ಆಂಡ್ ಚಾರಿಟೇಬಲ್ ಟ್ರಸ್ಟ್ ಸಹಯೋಗದಲ್ಲಿ ಆಷಾಢ ಮಾಸದ ಅಂಗವಾಗಿ ಜರುಗಿದ ಮಹಿಳೆಯರಿಗೆ ಉಡಿ ತುಂಬುವ ಹಾಗೂ 'ಸಿದ್ಧಾಂತ ಶಿಖಾಮಣಿ' ಆಧ್ಯಾತ್ಮಿಕ ಪ್ರವಚನ ಮಂಗಲೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸರ್ವಾರಾಧ್ಯನಾಗಿರುವ ಶಿವನನ್ನು ದೇಹದ ಮೇಲಿರಿಸಿಕೊಂಡು, ಲಿಂಗದೊಂದಿಗೆ ಬದುಕಿ, ಲಿಂಗದಲ್ಲಿ ಲೀನವಾಗುವ ಭಾಗ್ಯ ಮನುಷ್ಯನಿಗೆ ಮಾತ್ರ ಲಭಿಸಿದೆ. ಪ್ರತಿಯೊಬ್ಬರೂ ಪೂಜೆ ಮಾಡುವಾಗ ಎಷ್ಟು ಭಾವದೊಳಗೆ ಬೆರೆಯುತ್ತೇವೆ ಅಷ್ಟು ಪುಣ್ಯ ಸಿಗುತ್ತದೆ ಎಂದರು.

ಕಾಶೀ ಪೀಠ ಗದಗ ಮಹಾನಗರಕ್ಕೆ 25 ವರ್ಷಗಳ ಹಿಂದೆ ಆಗಮಿಸಿದಾಗ 21 ದಿನಗಳ ಕಾಲ ಆಷಾಢ ಮಾಸದಲ್ಲಿ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಹಾಗೂ ಗುರುಪೂರ್ಣಿಮೆ ಕಾರ್ಯಕ್ರಮ ಮಾಡಿದ್ದೆವು. ಪ್ರಸಕ್ತ ವರ್ಷ ನೂತನ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು ನಡೆಸಿದ್ದಾರೆ ಎಂದು ಹೇಳಿದರು.

ಧಾರವಾಡದ ಸರ್ಜನ್ ಡಾ. ಶಿವನಗೌಡ ರುದ್ರಗೌಡ ರಾಮನಗೌಡರ ಅವರಿಗೆ ಶ್ರೀ ಜಗದ್ಗುರು ಪಂಚಾಚಾರ್ಯ ಕೃಪಾಪೋಷಿತ 'ಧರ್ಮಪ್ರಕಾಶ' ಪ್ರಶಸ್ತಿ ಪ್ರದಾನ ಮಾಡಲಾಯಿತು. ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಂಗೀತ ಶಿಕ್ಷಕ ನಾಗಪ್ಪ ಆರ್. ಶಿರೋಳ ಅವರಿಗೆ ದಿವ್ಯಾಂಗ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ರಾಜು ಗುಡಿಮನಿ ಅವರನ್ನು ಸನ್ಮಾನಿಸಲಾಯಿತು.

ಕಾಶೀ ಪೀಠದ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು ಮಾತನಾಡಿ, ಅನೇಕ ಜನ್ಮಗಳ ಪುಣ್ಯದ ಫಲವಾಗಿ ಮಾನವ ಜನ್ಮ ಸಿಕ್ಕಿದೆ. ಗುರುವಿನ ಸಾನ್ನಿಧ್ಯದಲ್ಲಿ ದೇಹವನ್ನು ದಂಡಿಸುವ ಮೂಲಕ ನಮ್ಮ ಪೂರ್ಣಾಂಗಗಳು ಶರಣಾಗತಿ ಹೊಂದಿದಾಗ ಗುರುವಿನ ಕೃಪಾಕಟಾಕ್ಷ ಒಲಿಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಹುಬ್ಬಳ್ಳಿಯ ನವನಗರದ ಕಾಶೀ ಖಾಸಾ ಶಾಖಾ ಮಠದ ರಾಜಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಮನುಷ್ಯನನ್ನು ಭವಬಂಧನದಿಂದ ದೂರ ಮಾಡುವವನೇ ಸದ್ಗುರು. ಮಾನವ ಲೌಖಿಕ ಜೀವನದಲ್ಲಿ ಎಷ್ಟೇ ಅನುಭವ ಹೊಂದಿದ್ದರೂ ಶಾಸ್ತ್ರದ ಅಧ್ಯಯನ ಅವಶ್ಯವಿದೆ ಎಂದು ಹೇಳಿದರು.

ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಮಾತನಾಡಿದರು. ಜಿಗೇರಿಯ ಗುರುಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಮಲ್ಲಸಮುದ್ರ ಓಂಕಾರೇಶ್ವರ ಮಠದ ಫಕ್ಕೀರೇಶ್ವರ ಸ್ವಾಮೀಜಿ, ಒಪ್ಪತ್ತೇಶ್ವರ ಮಠದ ಒಪ್ಪತ್ತೇಶ್ವರ ಸ್ವಾಮೀಜಿ, ಅಡ್ನೂರ ಬೃಹನ್ಮಠದ ಅಭಿನವ ಪಂಚಾಕ್ಷರ ಸ್ವಾಮೀಜಿ ನೇತೃತ್ವ ವಹಿಸಿದ್ದರು.

ತಮಿಳುನಾಡಿನಲ್ಲಿ 40ಲಕ್ಷಕ್ಕೂ ಅಧಿಕ ವೀರಶೈವ ಲಿಂಗಾಯತ ಸಮಾಜದವರಿದ್ದು, ಇಷ್ಟಲಿಂಗ ಪೂಜೆ ಮಾಡುವ ಮೂಲಕ ಲಿಂಗದೀಕ್ಷೆ ನೀಡಲಾಗುತ್ತಿದೆ. ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು, ಮಹಾರಾಷ್ಟ್ರ, ಕೇರಳ ಹೊರತುಪಡಿಸಿ ಬೇರೆ ರಾಜ್ಯಗಳಲ್ಲಿಯೂ ವೀರಶೈವ ಲಿಂಗಾಯತ ಸಮುದಾಯದವರನ್ನು ಒಟ್ಟುಗೂಡಿಸುವ ಪ್ರಯತ್ನ ಕಾಶೀ ಪೀಠದಿಂದ ನೆರವೇರಿಸಲಾಗುತ್ತಿದೆ ಎಂದು ಕಾಶೀ ಪೀಠದ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯರು ಹೇಳಿದರು

ಸಂಘದ ಕಾರ್ಯಾಧ್ಯಕ್ಷ ಸಿದ್ದಲಿಂಗಪ್ಪ ಚಳಗೇರಿ, ಕಳಕನಗೌಡ ಪಾಟೀಲ, ಪ್ರಸನ್ನ ಶಾಬಾದಿಮಠ, ಆರ್.ಎ. ರಬ್ಬನಗೌಡರ, ಚಂದ್ರು ಬಾಳಿಹಳ್ಳಿಮಠ, ಸುರೇಶ ಅಬ್ಬಿಗೇರಿ, ಉಮಾಪತಿ ಭೂಸನೂರಮಠ, ಎಸ್.ಎಸ್. ಮೇಟಿ, ವೀರಭದ್ರಯ್ಯ ಧನ್ನೂರಹಿರೇಮಠ, ಆರ್.ಕೆ. ಮಠ, ಡಾ. ಶೇಖರ ಸಜ್ಜನರ ಸೇರಿ ಹಲವರು ಇದ್ದರು.

ಅಕ್ಕಮ್ಮ ಗುರುಸ್ವಾಮಿಮಠ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಸಂಘದ ಅಧ್ಯಕ್ಷ ಮಂಜುನಾಥ ಬೇಲೇರಿ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ವಿ.ಕೆ. ಗುರುಮಠ ನಿರೂಪಿಸಿದರು.

ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯಿಂದ ಗುರುಪೂರ್ಣಿಮೆ ಅಂಗವಾಗಿ ಜು. 12ರಿಂದ 20ರವರೆಗೆ ಗದಗ ಹಾತಲಗೇರಿ ರಸ್ತೆಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಪ್ರವಚನ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಪ್ರತಿ ದಿನ ಸಂಜೆ 7ರಿಂದ 8 ಗಂಟೆಯವರೆಗೆ ಸಾಂಸ್ಕೃತಿಕ ಹಾಗೂ ಧಾರ್ಮಿಕ ಚಿಂತಕ ಗದುಗಿನ ಡಾ. ಎಸ್.ಬಿ.ಶೆಟ್ಟರ ಇವರಿಂದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ, ಜು. 14ರಿಂದ 20ರವರೆಗೆ ಪ್ರತಿದಿನ ಮುಂಜಾನೆ 10ರಿಂದ 12 ಗಂಟೆಯವರೆಗೆ ಧ್ಯಾನ ಮಂದಿರದಲ್ಲಿ ಸದ್ಭಕ್ತರಿಂದ ಶ್ರೀ ಸಾಯಿ ಸಚ್ಚರಿತ್ರೆ ಪಾರಾಯಣ ಜರುಗಲಿದೆ.

ಜು. 14ರಂದು ಮುಂಜಾನೆ 8.30ಕ್ಕೆ ಶ್ರೀ ಸಾಯಿಬಾಬಾ ಅವರ ಜೋಳಿಗೆ ಭಿಕ್ಷಾ ಕಾರ್ಯಕ್ರಮವು ಶ್ರೀ ಸಾಯಿ ಮಂದಿರದಿಂದ ಪ್ರಾರಂಭವಾಗಿ ವಿವೇಕಾನಂದ ಬಡಾವಣೆ, ಕರಿಯಮ್ಮಕಲ್ಲ ಬಡಾವಣೆ ಹಾಗೂ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀ ರಾಘವೇಂದ್ರ ಮಠದ ಮುಖಾಂತರ ಸಾಯಿ ಮಂದಿರವನ್ನು ತಲುಪುವದು.

ಜು. 21ರಂದು ಗುರುಪೂರ್ಣಿಮೆ ಕಾರ್ಯಕ್ರಮ ನಡೆಯಲಿದ್ದು, ಬೆಳಿಗ್ಗೆ 6 ಗಂಟೆಗೆ ಕಾಕಡಾರತಿ, ನಂತರ ಬಾಬಾ ಅವರಿಗೆ ಮಂಗಲ ಸ್ನಾನ, ರುದ್ರಾಭಿಷೇಕ, ಅಲಂಕಾರ ಪೂಜೆ, ಮಧ್ಯಾನ್ಹ 12 ಗಂಟೆಗೆ ಪಂಚಾರತಿ ಹಾಗೂ ಸದ್ಭಕ್ತರಿಂದ ಪುಷ್ಪಾರ್ಚನೆ, ಅನ್ನಸಂತರ್ಪಣೆ ನಡೆಯಲಿದೆ. ಸಂಜೆ 5 ಗಂಟೆಗೆ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ, ಸೂರ್ಯಾಸ್ತಕ್ಕೆ ಧೂಪಾರತಿ ನಂತರ ಪಲ್ಲಕ್ಕಿ ಉತ್ಸವ, ರಾತ್ರಿ 10 ಗಂಟೆಗೆ ಶೇಜಾರತಿಯೊಂದಿಗೆ ಕಾರ್ಯಕ್ರಮ ಮಹಾಮಂಗಲಗೊಳ್ಳುವದು ಎಂದು ಗದಗ-ಬೆಟಗೇರಿಯ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಗದಗ-ಬೆಟಗೇರಿ ನಗರಸಭೆಯ 23ನೇ ವಾರ್ಡ್‌ನ ಬೂತ್ ನಂ 84ರಲ್ಲಿ ನಗರಸಭಾ ಸದಸ್ಯ ಜನಾಬ ಬರಕತಲಿ ಮುಲ್ಲಾ ನೇತೃತ್ವದಲ್ಲಿ ಕಾಂಗ್ರೆಸ್ ಕುಟುಂಬ ಅಭಿಯಾನ ಕೈಗೊಂಡು ಬಡಾವಣೆಯ ನಾಗರಿಕರ ಸದಸ್ಯತ್ವವನ್ನು ಪಡೆಯಲಾಯಿತು. ಈ ಸಂದರ್ಭದಲ್ಲಿ ಬಡಾವಣೆಯ ಮುಖಂಡರಾದ ಜನಾಬ ಅಸ್ಲಂ ಖ ಖಾಜೀ, ಸಾಮಾಜಿಕ ಕಾರ್ಯಕರ್ತ ರಾಘವೇಂದ್ರ ಪಾಲನಕರ, ಮಾಬುಸಾಬ ಅಡರಕಟ್ಟಿ, ರೇಣುಕಾ ಪೊತ್ನಾಳ, ಸೌಜನ್ಯತಾ ಸಮಗ್ರ ನಾಗರಿಕ ಹಿತರಕ್ಷಣಾ ಸಮಿತಿಯ ಅಧ್ಯಕ್ಷೆ ಸಹನಾ ರಾಘವೇಂದ್ರ ಪಾಲನಕರ ಮತ್ತಿತರರು ಉಪಸ್ಥಿತರಿದ್ದರು.

ಕ್ರೀಡಾಕೂಟಗಳಿಂದ ಸೌಹಾರ್ದತೆ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಪಾರದರ್ಶಕವಾಗಿ ಕ್ರೀಡಾಕೂಟಗಳನ್ನು ನಡೆಸುವುದು ನಮ್ಮಲ್ಲರ ಹೊಣೆಗಾರಿಕೆಯಾಗಿದೆ. ಮಕ್ಕಳಲ್ಲಿ ಸೌಹಾರ್ದತೆ ಮೂಡಿಸಲು ಕ್ರೀಡಾಕೂಟಗಳನ್ನು ನಡೆಸಲಾಗುತ್ತದೆ ಎಂದು ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಕೆ ಷಣ್ಮುಖಪ್ಪ ತಿಳಿಸಿದರು.

ಹರಪನಹಳ್ಳಿ ತಾಲೂಕಿನ ಚಿಗಟೇರಿ ನಾರದಮುನಿ ಪ್ರೌಢಶಾಲೆಯಲ್ಲಿ 2024-25ನೇ ಸಾಲಿನ ವಲಯ ಮಟ್ಟದ ಕ್ರೀಡಾಕೂಟಗಳ ಕ್ರಿಯಾಯೋಜನೆಗಳ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಅವರು ಮಾತಾಡಿದರು.

ಮಕ್ಕಳಲ್ಲಿ ಸೌಹಾರ್ದತೆಯ ಮನೋಭಾವ ಬೆಳೆಸಬೇಕು. ಸ್ಥಳೀಯ ತರಬೇತುದಾರರನ್ನು ನೇಮಕ ಮಾಡಿಕೊಳ್ಳದೇ ವಲಯ ಮಟ್ಟದ ಕ್ರೀಡಾಕೂಟಗಳನ್ನು ಸೌಹಾರ್ದಯುತವಾಗಿ, ಶಾಂತಿಯುತವಾಗಿ ದೈಹಿಕ ಶಿಕ್ಷಕರು ನಡೆಸಿಕೊಡಬೇಕು ಎಂದರು.

ದೈಹಿಕ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಜನಾರ್ಧನ ರೆಡ್ಡಿ ಮಾತನಾಡಿ, ಆಟಗಳಿಂದ ಮಕ್ಕಳಲ್ಲಿ ಚುರುಕುತನ ಹೆಚ್ಚುತ್ತದೆ ಮತ್ತು ಆಟಗಳಲ್ಲಿ ಪಾಲ್ಗೊಳ್ಳುವ ಮಕ್ಕಳು ಆರೋಗ್ಯವಂತರಾಗಿರುತ್ತಾರೆ. ಅವರನ್ನು ದೈಹಿಕವಾಗಿ ಸದೃಢಗೊಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯ ಶಿಕ್ಷಕ ಓಬಳೇಶ್ ವಹಿಸಿದ್ದರು. ಇದೇ ಸಂದರ್ಭದಲ್ಲಿ ನಿವೃತ್ತ ದೈಹಿಕ ಶಿಕ್ಷಣ ಪರಿವೀಕ್ಷಕ ಹೆಚ್.ಹನಮಂತಪ್ಪ ತೆಲಿಗಿ ರಾಣೆಬೆನ್ನೂರು ಅವರನ್ನು ಸನ್ಮಾನಿಸಲಾಯಿತು.

ಜಿಲ್ಲೆಯ ಅಭಿವೃದ್ಧಿ ಪಥ ತೀವ್ರಗೊಳಿಸಲು ಕ್ರಮ

▶▶ ಮೊದಲನೇ ಪುಟದಿಂದ

ಇತ್ತೀಚೆಗೆ ನಡೆದ ಮುಖ್ಯಮಂತ್ರಿಗಳ ಸಮ್ಮೇಳನದಲ್ಲಿ ಗದಗ ಜಿಲ್ಲೆಯು ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ 16ನೇ ಸ್ಥಾನ ಪಡೆದಿದ್ದು, ಮುಂದಿನ 6-8 ತಿಂಗಳಲ್ಲಿ 10ನೇ ಸ್ಥಾನದೊಳಗೆ ಬರಲು ಪ್ರಯತ್ನಿಸಲಾಗುತ್ತಿದೆ. ಜಿಲ್ಲಾ ಅಭಿವೃದ್ಧಿಗಾಗಿ ವಿಜನ್ ಡಾಕ್ಯುಮೆಂಟ್ 2024-25, 25-26, 26-27 ಸಿದ್ಧಪಡಿಸಿ ಕ್ರಿಯಾ ಯೋಜನೆ ರೂಪಿಸಲು ಸೂಚಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲೆಗಳ 400 ಕೊಠಡಿಗಳ ಕೊರತೆಯಿದ್ದು, ಸರ್ಕಾರದ ವಿವಿಧ ಯೋಜನೆಗಳ ಅನುದಾನದಿಂದ ಕೊಠಡಿಗಳ ನಿರ್ಮಾಣಕ್ಕೆ ಕ್ರಮ ವಹಿಸಲಾಗುತ್ತಿದೆ. ಜಿಲ್ಲೆಯಲ್ಲಿ 10,830 ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ಹಣವನ್ನು ಬಿಡುಗಡೆ ಮಾಡಲಾಗಿದೆ. 2430 ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ಬಾಕಿಯಿದೆ. ಮಾಸಾಂತ್ಯದಲ್ಲಿ ಎಲ್ಲ ಅರ್ಹ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ತಲುಪಿಸುವ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜನನ-ಮರಣ ನೋಂದಣಿಗಳ ಕಾರ್ಯಕ್ಕೆ ಗ್ರಾ.ಪಂ ಕಾರ್ಯದರ್ಶಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾದ ಹಿನ್ನೆಲೆಯಲ್ಲಿ ಜಿಲ್ಲೆಯ ಹುಲಕೋಟಿ ಗ್ರಾ.ಪಂ ಫಲಾನುಭವಿಗೆ ಜನನ ಪ್ರಮಾಣಪತ್ರ ಹಸ್ತಾಂತರಿಸಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಉಪಸ್ಥಿತರಿದ್ದರು.

ಡೆಂಘೀ ನಿಯಂತ್ರಣಕ್ಕೆ ಫಾಗಿಂಗ್

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಗೋವನಾಳ ಗ್ರಾ.ಪಂ ವತಿಯಂದ ಸೊಳ್ಳೆಗಳ ನಿಯಂತ್ರಣಕ್ಕಾಗಿ ಫಾಗಿಂಗ್ ಯಂತ್ರದ ಮೂಲಕ ಔಷಧಿ ಸಿಂಪರಣೆ ಕಾರ್ಯವನ್ನು ಕೈಗೊಂಡಿದ್ದು, ಗೋವನಾಳ ಸೇರಿದಂತೆ ಗ್ರಾ.ಪಂ ವ್ಯಾಪ್ತಿಯ ಗುಲಗೊಂಜಿಕೊಪ್ಪ, ಒಡೆಯರಮಲ್ಲಾಪುರ ಗ್ರಾಮಗಳಲ್ಲಿ ಫಾಗಿಂಗ್ ಕಾರ್ಯಕ್ರಮಕ್ಕೆ ಅಧ್ಯಕ್ಷ ಮಂಜನಗೌಡ ಕೆಂಚನಗೌಡ್ರ ಮತ್ತು ಸದಸ್ಯ ಪದ್ಮರಾಜ ಪಾಟೀಲ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸೊಳ್ಳೆಗಳನ್ನು ಅಲಕ್ಷಿಸಿದರೆ ಡೆಂಘೀ ಜ್ವರದಂತಹ ಪ್ರಾಣಾಂತಿಕ ಕಾಯಿಲೆಗಳು ಬರಬಹುದು. ಈ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಫಾಗಿಂಗ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಸ್ವಚ್ಛತೆ, ನೈರ್ಮಲ್ಯದ ಕುರಿತಾಗಿ ಜಾಗ್ರತಿ ವಹಿಸಬೇಕು. ಸೊಳ್ಳೆಗಳ ನಿಯಂತ್ರಣಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ಎಲ್ಲರೂ ಕೈಜೋಡಿಸಬೇಕು. ಡೆಂಘೀ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಸದಸ್ಯರಾದ ಕರಿಯಪ್ಪಗೌಡ ಹೊಸಗೌಡ್ರ, ಅಣ್ಣಪ್ಪ ರಾಮಗೇರಿ, ಗೊವನಾಳ ಗ್ರಾಮದ ಹಿರಿಯರಾದ ಭರಮಣ್ಣ ರೊಟ್ಟಿಗವಾಡ, ನಿಂಗನಗೌಡ ಮರಲಿಂಗನಗೌಡ್ರ, ಬಸವರಾಜ ಮಲ್ಲೂರು, ನಿಂಗನಗೌಡ ಮನಕಟ್ಟಿ, ಚಂದ್ರು ತಳವಾರ, ಗಂಗಾಧರ ಮಾದರ, ಗ್ರಾ.ಪಂ ಸಿಬ್ಬಂದಿಗಳು ಇದ್ದರು.

ಅಹಿಂದ ಒಕ್ಕೂಟದ ತಾಲೂಕಾ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ

ಒಕ್ಕೂಟ ನೊಂದವರ ಧ್ವನಿಯಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಸಂಘಟನೆಗಳು ಬೇಕು. ಆದರೆ ನೆಪ ಮಾತ್ರಕ್ಕೆ ಸಂಘಟನೆಗಳನ್ನು ಹುಟ್ಟುಹಾಕುವ ಕಾರ್ಯ ಮಾಡುವದು ಬೇಡ. ಸಮಾಜಕ್ಕೆ ಒಳ್ಳೆಯದಾಗುವಂತಹ ಕಾರ್ಯಗಳನ್ನು ಮಾಡುವ ಉದಾತ್ತ ಮನೋಭಾವನೆಯ ಸಂಘಟನೆಗಳು ಅವಶ್ಯವಾಗಿದೆ. ಈ ನಿಟ್ಟಿನಲ್ಲಿ ಅಹಿಂದ ಒಕ್ಕೂಟ ನೊಂದವರ, ಶೋಷಿತರ ಧ್ವನಿಯಾಗಿ ಕೆಲಸ ಮಾಡುತ್ತದೆ ಎಂದು ಗದಗ ಜಿಲ್ಲಾ ಅಹಿಂದ ಒಕ್ಕೂಟದ ಗೌರವಾಧ್ಯಕ್ಷ ಸೋಮಣ್ಣ ಬೆಟಗೇರಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದಲ್ಲಿ ಶುಕ್ರವಾರ ಗದಗ ಜಿಲ್ಲಾ ಅಹಿಂದ ಒಕ್ಕೂಟದ ವತಿಯಿಂದ ವಿವಿಧ ತಾಲೂಕಗಳ ಪದಾಧಿಕಾರಿಗಳ ಪದಗ್ರಹಣ ಮತ್ತು ನೂತನ ಪದಾಧಿಕಾರಿಗಳ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

ಸಂಘಟನೆಗಳು ಶೋಷಿತರ, ನೊಂದವರ ಕಣ್ಣೀರು ಒರಿಸುವ ಸಂಘಟನೆಗಳಾಗಬೇಕು. ತಮ್ಮ ಅನೂಕೂಲತೆಗಾಗಿ ಸಂಘಟನೆಗಳನ್ನು ಕಟ್ಟಿಕೊಳ್ಳುವ ಪ್ರವೃತ್ತಿ ಹೆಚ್ಚುತ್ತಿದೆ. ಸಮಾಜದಲ್ಲಿ ಕಟ್ಟಕಡೆಯ ವ್ಯಕ್ತಿಗೂ ಸಹ ಸೌಲಭ್ಯಗಳು ದೊರೆಯುವಂತೆ ಮಾಡುವ ಕಾರ್ಯಗಳನ್ನು ಸಂಘಟನೆಗಳು ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಅಹಿಂದ ಸಂಘಟನೆ ಬೆಳೆದು ಬರುತ್ತಿದ್ದು, ಇದು ಯಾವುದೇ ಪಕ್ಷ, ಜಾತಿಗೆ ಸೀಮಿತವಾಗಿಲ್ಲ ಎಂದು ಹೇಳಿದರು.

ಅಹಿಂದ ಜಿಲ್ಲಾಧ್ಯಕ್ಷ ಸೋಮನಗೌಡ್ರ ಮರೀಗೌಡ್ರ ಮಾತನಾಡಿ, 2020ರಲ್ಲಿಯೇ ಗದಗ ಜಿಲ್ಲೆಯಲ್ಲಿ ಅಹಿಂದ ಸಂಘಟನೆ ಪ್ರಾರಂಭವಾಗಿದ್ದು, ಬಡವರ ಅಭಿವೃದ್ಧಿಗೆ, ಬಡಮಕ್ಕಳ ವಿದ್ಯಾಭ್ಯಾಸಕ್ಕೆ, ಶೋಷಿತರಿಗೆ ಅನ್ಯಾಯವಾದಲ್ಲಿ ಅಹಿಂದ ಸಂಘಟನೆ ಅವರ ಪರವಾಗಿ ಕೆಲಸ ಮಾಡುತ್ತದೆ. ದೇವರಾಜ ಅರಸು ಅವರ ಸಿದ್ಧಾಂತದಂತೆ ಸಂಘಟನೆ ಕೆಲಸ ಮಾಡಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರ. ಕಾರ್ಯದರ್ಶಿ ಮಲ್ಲಪ್ಪ ಹುಯಿಳಗೋಳ, ಉಪಾಧ್ಯಕ್ಷ ಯಲ್ಲಪ್ಪ ಸೂರಣಗಿ, ಮಂಜುನಾಥ ತಳವಾರ, ಕರಿಯಪ್ಪ ಬಳೂಟಗಿ, ಶಿವಣ್ಣ ಕಬ್ಬೇರ, ನೀಲಪ್ಪ ಪಡಗೇರಿ, ಅಬ್ದುಲರಜಾಕ ಗಾಡಗೊಳಿ, ರಾಮಣ್ಣ ರಿತ್ತಿ, ಮುದಕಣ್ಣ ಗದ್ದ

ಮಳೆಗಾಗಿ ರೈತರಿಂದ ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೊಪ್ಪಿನಕೇರಿ ಓಣಿಯ ರೈತ ಸಮುದಾಯ ಈ ವರ್ಷವೂ ಮಳೆಗಾಗಿ ಪ್ರಾರ್ಥಿಸಿ ಶ್ರೀ ಕೊಲ್ಲಾರೆಮ್ಮ ದೇವಿಗೆ ವಿಶೇಷ ಪೂಜೆ, ಎತ್ತಿನ ಮೆರವಣಿಗೆ, ಮಹಿಳೆಯರ ಪೂರ್ಣಕುಂಭ, ಪ್ರಸಾದ ಸೇವೆ ಮಾಡುವ ಮೂಲಕ ಮಳೆಗಾಗಿ ಪರವು ಸಂಪ್ರದಾಯ ಆಚರಿಸಿದರು.

ಈ ವಿಶೇಷ ಪರವು ಸಂಪ್ರದಾಯ ಆಚರಣೆಗಾಗಿ ಓಣಿಯ ಹಿರಿಯರು, ಯುವಕರು ಜಂಪ್ಲಿ ಬಸವೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ರಾತ್ರೋರಾತ್ರಿ ಗೋದಿ ಹುಗ್ಗಿ, ಜೋಳದ ಕಿಚಡಿ, ಅನ್ನ-ಸಾರು ಪ್ರಸಾದ ಸಿದ್ಧಪಡಿಸುತ್ತಾರೆ. ಬೆಳಿಗ್ಗೆ ಅಂಲಕೃತ ಎತ್ತಿನ ಬಂಡಿ, ಟ್ರ್ಯಾಕ್ಟರ್‌ಗಳಲ್ಲಿ ಸಿದ್ಧಪಡಿಸಿ ಪ್ರಸಾದವನ್ನಿರಿಸಿ ಡೊಳ್ಳು, ಭಜನೆ, ಮಹಿಳೆಯರ ಪೂರ್ಣಕುಂಭ, ಎತ್ತುಗಳ ಮೆರವಣಿಗೆ ಮೂಲಕ ಭಜನೆ ಅಡರಕಟ್ಟಿ ಹತ್ತಿರದ ಕೊಲ್ಲಾರೆಮ್ಮನ ಪೌಳಿಗೆ ತೆರಳಿ ಅಲ್ಲಿ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ.

ಈ ಸಂದರ್ಭದಲ್ಲಿ ದೇವಿ ಮಳೆಯ ಭವಿಷ್ಯ ಉದ್ಧರಿಸುತ್ತಾಳೆ. ನಂತರ ಲಕ್ಷ್ಮೇಶ್ವರ, ಮಂಜಲಾಪುರ, ಅಡರಕಟ್ಟಿ ಸುತ್ತಮುತ್ತಲಿನ ಭಾಗದ ರೈತ ಕುಟುಂಬಗಳಷ್ಟೇ ಅಲ್ಲದೆ ಈ ಮಾರ್ಗದಲ್ಲಿ ಸಂಚರಿಸುವ ಸಾವಿರಾರು ಜನರನ್ನು ಕರೆದು ಪ್ರಸಾದ ಉಣಬಡಿಸಿದರು. ಸಂಜೆ ಸೂರಣಗಿಯ ಡೊಳ್ಳು ಮೇಳದೊಂದಿಗೆ ಪಟಾಕಿ ಸಿಡಿಸಿ ಪಟ್ಟಣದ ಪ್ರಮುಖ ಮಾರ್ಗದಲ್ಲಿ ವಿಜೃಂಭಣೆಯಿಂದ ಎತ್ತುಗಳ ಮೆರವಣಿಗೆ ಜರುಗಿತು. ಓಣಿಯ ಹಿರಿಯರು, ಮಹಿಳೆಯರು ಸೇರಿ ರೈತ ಸಮುದಾಯದವರು ಪಾಲ್ಗೊಂಡಿದ್ದರು.

ಪ್ರವಚನ ಆಲಿಸಲು ಕರೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಕಲ ಜೀವರಾಶಿಗಳಲ್ಲಿ ಮಾನವ ಜನ್ಮ ಶ್ರೇಷ್ಠತೆಯನ್ನು ಪಡೆದುಕೊಂಡಿದೆ. ಮಾನವ ಮಹಾ ಮಾನವನಾಗಬೇಕಾದರೆ ಭಕ್ತಿ, ಜ್ಞಾನ, ವೈರಾಗ್ಯದ ಭಾವವನ್ನು ಹೊಂದಬೇಕು. ಇದಕ್ಕೆ ಪುರಾಣ, ಪುಣ್ಯಕತೆಗಳು, ಪ್ರವಚನಗಳು ಪೂರಕವಾಗಿವೆ ಎಂದು ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯ ಡಾ.ಕಲ್ಲಯ್ಯಜ್ಜನವರು ಹೇಳಿದರು.

ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದ ಹಿರೇಮಠದ ಭಕ್ತರು ಹಾಗೂ ಶ್ರೀಗುರು ಸಾಂಸ್ಕೃತಿಕ ಶಿವಾನುಭವ ಸಮಿತಿ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗುರುಪೂರ್ಣಿಮೆ ನಿಮಿತ್ತ ಏರ್ಪಡಿಸಿರುವ ಸುಕ್ಷೇತ್ರ ಘತ್ತರಗಾ ಭಾಗ್ಯವಂತಿ ದೇವಿಯ ಪುರಾಣ ಪ್ರವಚನಕ್ಕೆ ಚಾಲನೆ ನೀಡಿ ಮಾತನಾಡಿದ ಶ್ರೀಗಳು, ಅಜ್ಞಾನದ ಕತ್ತಲೆಯನ್ನು ಹೊಡೆದೋಡಿಸಿ ಸುಜ್ಞಾನದ ಬೆಳಕನ್ನು ಪಡೆಯಬೇಕಾದರೆ ಪುರಾಣ, ಪ್ರವಚನ, ಸಂಗೀತವನ್ನು ಆಲಿಸಬೇಕೆಂದರು.

ಮುಖ್ಯ ಅತಿಥಿ ಪ್ರಭಯ್ಯ ಹಿರೇಮಠ ಮಾತನಾಡಿ, ಗ್ರಾಮದ ಗುರು-ಹಿರಿಯರು ಕೂಡಿಕೊಂಡು ಪ್ರವಚನ ಪ್ರಾರಂಭಿಸಿದ್ದು ಸಂತೋಷದ ಸಂಗತಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಸಯ್ಯ ಹಿರೇಮಠ ಮಾತನಾಡಿದರು. ಸಿದ್ಧೇಶ್ವರ ಶಾಸ್ತ್ರೀಗಳು ತೆಲ್ಲೂರ ಅವರಿಂದ ಪ್ರವಚನ, ವಿನಯಕುಮಾರ ಹಿರೇಮಠ ಹಾಗೂ ವೀರೇಶ ಹಿರೇಮಠ ಸಂಗೀತ ಜರುಗಿತು. ಈರಣ್ಣ ಗೌಡರ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರು, ಭಕ್ತಾಧಿಗಳು ಪಾಲ್ಗೊಂಡಿದ್ದರು.

ಸಾಂಕ್ರಾಮಿಕ ರೋಗಗಳ ಬಗ್ಗೆ ಎಚ್ಚರಿಕೆಯಿರಲಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಾಂಕ್ರಾಮಿಕ ರೋಗಗಳು ಹರಡುವ ಮುನ್ನ ಅವುಗಳ ಬಗ್ಗೆ ಮುನ್ನೆಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯ ಎಂದು ಸೊರಟೂರ ಗ್ರಾಮ ಪಂಚಾಯಿತಿ ಪಿಡಿಓ ಮಾಲತೇಶ ಮೆವುಂಡಿ ಹೇಳಿದರು.

ಅವರು ಸಮೀಪದ ಸೊರಟೂರ ಗ್ರಾಮದ ಸರಕಾರಿ ಆಯುರ್ವೇದ ಚಿಕಿತ್ಸಾಲಯದಲ್ಲಿ ಸಾಂಕ್ರಾಮಿಕ ರೋಗ ಮುನ್ನೆಚ್ಚರಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗ್ರಾಮದಲ್ಲಿ ಈಗಾಗಲೇ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಿಕರು ತಮ್ಮ ಮನೆಗಳ ಸುತ್ತ ಮುತ್ತ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಇದರಿಂದ ಸಾಂಕ್ರಾಮಿಕ ರೋಗ-ರುಜಿನುಗಳಿಂದ ತಪ್ಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದರು.

ಡಾ. ಎಸ್.ಆರ್. ಮಡಿವಾಳರ ಮಾತನಾಡಿ, ಡೆಂಘೀ, ಮಲೇರಿಯಾ, ಚಿಕುನ್‌ಗುನ್ಯಾ ಸಾಂಕ್ರಾಮಿಕ ರೋಗಗಳು ಈ ಮಳೆಗಾಲದಲ್ಲಿ ಹೆಚ್ಚು ಕಾಣಿಸಿಕೊಳ್ಳುವುದರಿಂದ ಸಾರ್ವಜನಿಕರು ಮನೆಯಲ್ಲಿ ನೀರಿನ ಪರಿಕರಗಳನ್ನು ಸ್ವಚ್ಛಗೊಳಿಸಬೇಕು. ಒಂದು ವೇಳೆ ಜ್ವರ ಕಾಣಿಸಿಕೊಂಡಲ್ಲಿ ತಕ್ಷಣ ಸಮೀಪದ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಂಡು ಗುಣಮುಖರಾಗಬೇಕು ಎಂದರು.

ಗ್ರಾ.ಪಂ ಅಧ್ಯಕ್ಷ ಚಂದ್ರವ್ವ ಓಂಕಾರಿ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಸದಸ್ಯರಾದ ಹುಸೇನಬಿ ಚೋಳನವರ, ಬಸಪ್ಪ ಅಣ್ಣಿಗೇರಿ, ಯೋಗ ಶಿಕ್ಷಕ ಹೊನಕೇರಪ್ಪ ಗಾರವಾಡ, ಬಸವರಾಜ ಖಾನಾಪೂರ, ವೀಣಾ ಮಡ್ಡಿಕಾರ, ಶಿವಪುತ್ರಪ್ಪ ಹಂಪಿಹೊಳಿ, ಶ್ರೀದೇವಿ ಅಡ್ರಕಟ್ಟಿ, ಉಮಾ ಕುಸ್ಲಾಪೂರ, ಲತಾ ಮಾಯಪ್ಪನವರ, ಸರಸ್ವತಿ ಓಂಕಾರಿ, ನೀಲಮ್ಮ ಕಲ್ಮನಿ ಇದ್ದರು.

ಜಾಗೃತಿ ಮೂಡಿಸಿದ ಪ್ರಕೃತಿ ವಿಕೋಪ ನಿರ್ವಹಣೆ ಕುರಿತ ಅಣುಕು ಪ್ರದರ್ಶನ

ಜೀವಹಾನಿ ನಿಯಂತ್ರಣದಲ್ಲಿ ಕೈಜೋಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಹಂಗಾಮಿನ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಪ್ರವಾಹ ಸಂಭವಿಸಿದಾಗ ಉಂಟಾಗುವ ಸಂಕಷ್ಟದಿಂದ ಪಾರಾಗುವ ವಿಧಾನವನ್ನು ಜಿಲ್ಲಾ ಮಟ್ಟದಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡದವರು ಅಣುಕು ಪ್ರದರ್ಶನ ಪ್ರಸ್ತುತಪಡಿಸಿ ಜಾಗೃತಿ ಮೂಡಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ನಗರದ ಭೀಷ್ಮಕೆರೆ ಆವರಣದಲ್ಲಿ ಜಿಲ್ಲಾಡಳಿತ,

> ಈ ಅಣುಕು ಪ್ರದರ್ಶನ ಏರ್ಪಡಿಸುವ ಮೂಲಕ ಜಿಲ್ಲೆಯಲ್ಲಿ ಅತಿವೃಷ್ಟಿ ಹಾಗೂ ಪ್ರವಾಹ ಎದುರಾದಾಗ ಸಾರ್ವಜನಿಕರ ಜೀವಹಾನಿ ತಡೆಯುವ ವಿಧಾನ ಹಾಗೂ ಆಸ್ತಿ ಸಂರಕ್ಷಣೆ ಕುರಿತು ಜನ ಸಾಮಾನ್ಯರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ವಿಪತ್ತು ನಿರ್ವಹಣಾ ತಂಡದೊಂದಿಗೆ ಸಂದಿಗ್ಧ ಪರಿಸ್ಥಿತಿಯಲ್ಲಿ ಸಾರ್ವಜನಿಕರೂ ಸಹ ಸಹಕಾರ ನೀಡುವ ಮೂಲಕ ಜೀವ ಹಾನಿ ನಿಯಂತ್ರಣದಲ್ಲಿ ಕೈಜೋಡಿಸಬೇಕು ಎಂದು ಎನ್‌ಡಿಆರ್‌ಎಫ್ ಮುಖ್ಯಸ್ಥ, ಇನ್ಸ್‌ಪೆಕ್ಟರ್ ಗೋಪಾಲಕೃಷ್ಣ ಹೇಳಿದರು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡದೊಂದಿಗೆ ಆಯೋಜಿಸಲಾದ ಅಣುಕು ಪ್ರದರ್ಶನ ವೀಕ್ಷಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡದೊಂದಿಗೆ ಜಿಲ್ಲಾ ಮಟ್ಟದ ವಿವಿಧ ತಂಡಗಳು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಂತ್ರಸ್ತರನ್ನು (ಸಾರ್ವಜನಿಕರನ್ನು) ಪಾರು ಮಾಡುವುದಲ್ಲದೇ ತುರ್ತು ಪರಿಸ್ಥಿತಿಗನುಸಾರವಾಗಿ ಅವರ ಆರೋಗ್ಯ ರಕ್ಷಣೆಯ ಕಾರ್ಯಾಚರಣೆಗೂ ಕೂಡ ಮುಂದಾಗಲಿವೆ ಎಂದರು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡದ (ಎನ್‌ಡಿಆರ್‌ಎಫ್) ಮುಖ್ಯಸ್ಥರಾದ ಇನ್ಸ್‌ಪೆಕ್ಟರ್ ಗೋಪಾಲಕೃಷ್ಣ ಮಾತನಾಡಿ, ಪ್ರವಾಹ ಸಂದರ್ಭ ಉಂಟಾದಾಗ ನಾಗರಿಕರ ಪ್ರಾಣ ರಕ್ಷಣೆಗಾಗಿ ನಮ್ಮ ತಂಡವು ಸದಾ ಸನ್ನದ್ಧವಾಗಿ ಕಾರ್ಯನಿರ್ವಹಿಸುತ್ತದೆ ಎಂದರು.

ಈ ಅಣುಕು ಪ್ರದರ್ಶನ ವೀಕ್ಷಿಸಿದ ಜನಸಾಮಾನ್ಯರು, ಎನ್‌ಡಿಆರ್‌ಎಫ್ ತಂಡದ ಮೂಲಕ ಜನರ ಜೀವ ರಕ್ಷಣೆಯಲ್ಲಿ ಇತರರಿಗೂ ತಿಳಿಸಿಕೊಡುವ ಮೂಲಕ ಜೀವ ಹಾನಿ ಹಾಗೂ ಆಸ್ತಿ ಹಾನಿ ತಡೆಯುವದು ಈ ಅಣುಕು ಪ್ರದರ್ಶನದ ಮೂಲ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಜಿಲ್ಲಾ ಅಗ್ನಿಶಾಮಕ ದಳದ ಅಧಿಕಾರಿ ವಿ.ಎಸ್. ಠಕ್ಕೇಕರ್, ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತ ಶಿವಾನಂದ ರಾಜನಾಳ, ಎನ್‌ಡಿಆರ್‌ಎಫ್ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿಗಳು, ವೋಡಾಫೋನ್, ಏರ್‌ಟೆಲ್, ಜಿಯೋ, ಬಿಎಸ್‌ಎನ್‌ಎಲ್ ಸೇರಿದಂತೆ ದೂರವಾಣಿ ಸಂಸ್ಥೆಯವರು, ಎನ್‌ಎಸ್‌ಎಸ್ ಘಟಕದವರು ಹಾಜರಿದ್ದರು.

ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ದೇವತಾ ಮೂರ್ತಿಗಳ ಪ್ರತಿಷ್ಠಾಪನೆ

ಆರ್ಯವೈಶ್ಯ ಸಮಾಜದ ಕಾರ್ಯ ಮಾದರಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಸಂಘಟನೆಯಿಂದ ಏನೆಲ್ಲವನ್ನೂ ಸಾಧಿಸಬಹುದು. ಶೂನ್ಯದಿಂದ ಸ್ವರ್ಗವನ್ನೇ ನಿರ್ಮಾಣ ಮಾಡಬಹುದು ಎಂಬುದನ್ನು ನರೇಗಲ್ಲದ ಆರ್ಯವೈಶ್ಯ ಸಮಾಜ ಸಾಧಿಸಿ ತೋರಿಸಿದೆ. ಈ ಮೂಲಕ ಅದು ಇತರರಿಗೆ ಮಾದರಿಯಾಗಿದೆ ಎಂದು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶ್ರೀಗಳು ಹೇಳಿದರು.

ಪಟ್ಟಣದಲ್ಲಿ ನಿರ್ಮಾಣಗೊಂಡಿರುವ ನೂತನ ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ಶುಕ್ರವಾರ ನಡೆದ ದೇವತಾ ಮೂರ್ತಿಗಳ ಪ್ರತಿಷ್ಠಾಪನೆ, ಧರ್ಮ ಸಭೆಯ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿ ಮಾತನಾಡಿದರು.

ದೇವಸ್ಥಾನಗಳನ್ನು ನಿರ್ಮಿಸಿದರೆ ಸಾಲದು. ಅದನ್ನು ನಿರ್ವಹಣೆ ಮಾಡುವ ಕಾರ್ಯ ಅತ್ಯಂತ ಕಠಿಣದ್ದಾಗಿದೆ. ಆದರೆ ಆರ್ಯವೈಶ್ಯ ಸಮಾಜದವರು ಈ ದಿಶೆಯಲ್ಲಿ ಯಾವಾಗಲೂ ಭಕ್ತಿಭಾವವನ್ನು ಹೊಂದಿರುವುದರಿಂದ ದೇವಸ್ಥಾನದ ನಿರ್ವಹಣೆಗೂ ಯಾವ ತೊಂದರೆ ಬರದು ಎಂದು ಅವರು ಅಭಿಪ್ರಾಯಪಟ್ಟರು.

> ಶ್ರೀ ಕನ್ಯಕಾ ಪರಮೇಶ್ವರಿಯು ಪಾರ್ವತಿಯ ಇನ್ನೊಂದು ರೂಪವಾಗಿದ್ದು, ಆ ದೇವಿಯ ಸ್ತುತಿಯನ್ನು ಮಾಡುವದರಿಂದ ನಿಮ್ಮ ಸಕಲ ಇಷ್ಟಾರ್ಥಗಳು ನೆರವೇರುತ್ತವೆ. ಪ್ರತಿಷ್ಠಾಪಿತ ಮೂರ್ತಿಗಳು ಒಂದು ಸಂದೇಶವನ್ನು ನೀಡುತ್ತಿದ್ದು, ಅವುಗಳನ್ನು ಅರ್ಥ ಮಾಡಿಕೊಂಡು ಭಕ್ತಿಯಿಂದ ಪೂಜೆ ಸಲ್ಲಿಸಿದರೆ ನಾವು ಮನಸ್ಸಿನ ನೆಮ್ಮದಿಯನ್ನು ಪಡೆಯಬಹುದು ಎಂದು ಶ್ರೀಗಳು ಹೇಳಿದರು.

ಉದ್ಯಮಿ ಶಿವಾನಂದ ಕಂಪ್ಲಿ ಮಾತನಾಡಿ, ಎಲ್ಲರೂ ಒಮ್ಮನದಿಂದ ಶ್ರಮಿಸಿ, ಪರ ಸ್ಥಳದ ಎಲ್ಲರೂ ಕೈ ಜೋಡಿಸಿದ್ದರಿಂದ ಈ ದೇವಸ್ಥಾನ ನಿರ್ಮಾಗೊಂಡಿದೆ. ಇದನ್ನು ಅತ್ಯಂತ ವ್ಯವಸ್ಥಿತವಾಗಿ ಮುನ್ನಡೆಸಿಕೊಂಡು ಹೋಗುವ ಜವಾಬ್ದಾರಿ ಇಲ್ಲಿನ ಎಲ್ಲ ನಾಗರಿಕರ ಮೇಲಿದೆ. ಈ ದೇವಸ್ಥಾನದಲ್ಲಿ ಭಜನೆ, ಜಪ-ತಪ, ಪ್ರವಚನ ಇತ್ಯಾದಿಗಳು ವರ್ಷದುದ್ದಕ್ಕೂ ನಡೆಯುವಂತಾಗಲಿ ಎಂದು ಅವರು ಹಾರೈಸಿದರು.

ಮೂರ್ತಿಗಳನ್ನು ನಿರ್ಮಿಸಿ ಕೊಟ್ಟ ಶಿಲ್ಪಿ ಸದಾಶಿವ ಶೆಣೈ ಮಾತನಾಡಿ, ಮೂರ್ತಿಗಳು ಅತ್ಯಂತ ಸುಂದರವಾಗಿ ಕೆತ್ತಲ್ಪಟ್ಟಿವೆ ಎಂದು ಎಲ್ಲರೂ ಹೇಳುತ್ತೀರಿ. ಇದಕ್ಕೆ ಆ ಪರಮೇಶ್ವರನ ಅನುಗ್ರಹವೇ ಕಾರಣ ಹೊರತು, ವೈಯಕ್ತಿಕವಾಗಿ ನನ್ನದೇನಿಲ್ಲ ಎಂದರು.

ಸಭೆಯನ್ನುದ್ದೇಶಿಸಿ ಗದಗ ಬಾಲಾಜಿ ಶಾಮಿಯಾನದ ಮಾಲೀಕ ಎನ್.ರಾಮರಾವ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ಗುರುರಾಜ ಕುಲಕರ್ಣಿ ಮುಂತಾದವರು ಮಾತನಾಡಿದರು. ವೇದಿಕೆಯ ಮೇಲೆ ಕಾಳಿಕಾ ದೇವಸ್ಥಾನದ ಅಧ್ಯಕ್ಷ ನಾರಾಯಣ ವಡ್ಡಟ್ಟಿ, ಸುರೇಶ ಗುಡಿಸಾಗರ, ಚಂದ್ರಹಾಸ ಇಲ್ಲೂರ, ಉದ್ಯಮಿ ಗೋವಿಂದರಾ ಜ ಗುಡಿಸಾಗರ, ಇಂಜಿನಿಯರ್ ಭಾರತಿ ಧರ್ಮಾಯತ ಮುಂತಾದವರಿದ್ದರು.

ಅಧ್ಯಕ್ಷತೆ ವಹಿಸಿದ್ದ ರಾಮಚಂದ್ರಪ್ಪ ನವಲಿ ಅಧ್ಯಕ್ಷೀಯ ನುಡಿಗಳನ್ನಾಡಿದರು. ವೀರಭದ್ರ ಇಲ್ಲೂರ ಸ್ವಾಗತಿಸಿದರು. ರಾಘವೇಂದ್ರ ಕಾಲವಾಡ ನಿರೂಪಿಸಿದರು. ಸುರೇಶ ನವಲಿ ವಂದಿಸಿದರು.

ಜಿಮ್ಸ್‌ನಿಂದ ಇ-ಪೋಸ್ಟರ್ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಜನಸಂಖ್ಯಾ ದಿನದ ಅಂಗವಾಗಿ, ಸಮುದಾಯ ವೈದ್ಯಕೀಯ ವಿಭಾಗದಿಂದ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಇ-ಪೋಸ್ಟರ್ ರಚನೆ ಸ್ಪರ್ಧೆಯನ್ನು ನಡೆಸಲಾಯಿತು.

ಮನೋವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ. ಗೀರೀಶ ನಾಗರಾಳ, ಚರ್ಮ ವಿಭಾಗದ ಮುಖ್ಯಸ್ಥ ಡಾ. ಅರವಿಂದ್ ಕೆ, ಸ್ಪರ್ಧೆಗೆ ತೀರ್ಪುಗಾರರಾಗಿದ್ದರು. ಸಮುದಾಯ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ರಮೇಶ ಮಾಯಪ್ಪನವರ್ ಮತ್ತು ಡಾ. ರುದ್ರಮ್ಮ ಜೆ ಮಾರ್ಗದರ್ಶನದಲ್ಲಿ ಒಟ್ಟು 40 ವಿದ್ಯಾರ್ಥಿಗಳು ತಮ್ಮ ಇ-ಪೋಸ್ಟರ್‌ಗಳೊಂದಿಗೆ ಜನಸಂಖ್ಯೆಯ ಅಪಾಯಕಾರಿ ಹೆಚ್ಚಳದ ಮತ್ತು ನಿಯಂತ್ರಣವನ್ನು ಪ್ರತಿನಿಧಿಸುವ ಸ್ಪರ್ಧೆಯಲ್ಲಿ ಭಾಗವಹಿಸಿದರು. ಕುಟುಂಬ ದತ್ತು ಕಾರ್ಯಕ್ರಮದ ಅಡಿಯಲ್ಲಿ ವಿಧ್ಯಾರ್ಥಿಗಳು ಜನಸಂಖ್ಯೆಯ ಹೆಚ್ಚಳದ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಿ, ಕುಟುಂಬ ಯೋಜನೆ ವಿಧಾನಗಳನ್ನು ಅವಳಡಿಸಿಕೊಳ್ಳಲು ದಂಪತಿಗಳನ್ನು ಪ್ರೇರೇಪಿಸುತ್ತಿದ್ದಾರೆ.

ಜಿಮ್ಸ್ ನಿರ್ದೇಶಕರಾದ ಡಾ. ಬಸವರಾಜ ಪಿ ಬೊಮ್ಮನಹಳ್ಳಿ, ಪ್ರಾಂಶುಪಾಲರಾದ ಡಾ. ರಾಜು ಜಿ.ಎಂ, ಡಾ. ರೇಖಾ ಸೋನಾವನೆ, ಸಮುದಾಯ ವೈದ್ಯ ವಿಭಾಗದ ಮುಖ್ಯಸ್ಥರು ಹಾಗೂ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಭಾಗವಹಿಸುವಿಕೆಯನ್ನು ಶ್ಲಾಘಿಸಿ ವಿಜೇತರನ್ನು ಅಭಿನಂದಿಸಿದರು.

ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಜಿಎಂಪಿಎಸ್ ಶಾಲೆಗೆ ಇಕಖಔಓ ಸಂಸ್ಥೆಯ ವತಿಯಿಂದ ಸುಮಾರು 35 ಸಾವಿರ ರೂ ಮೌಲ್ಯದ ಸಾಮಗ್ರಿಗಳನ್ನು ವಿತರಿಸಲಾಯಿತು.

ಅತಿಥಿಗಳಾಗಿ ಆಗಮಿಸಿದ್ದ ತಾಲೂಕಿನ ದೈಹಿಕ ಶಿಕ್ಷಣಾಧಿಕಾರಿ ಎಂ.ಎಂ. ಹವಳದ ಮಾತನಾಡಿ, ಮಕ್ಕಳ ಕಲಿಕೆಗೆ ಪೂರಕವಾಗುವ ಉಚಿತ ನೋಟ್ ಪುಸ್ತಕಗಳನ್ನು ಇಕಖಔಓ ಸಂಸ್ಥೆಯಿಂದ ವಿತರಿಸಲಾಗುತ್ತಿದೆ. ಅತಿ ಸುಂದರವಾದ ಶಾಲಾ ಅವರಣದಲ್ಲಿ ನೂರಾರು ಗಿಡ-ಮರಗಳು ಹಸಿರಿನಿಂದ ಕಂಗೊಳಿಸುತ್ತಿವೆ. ಸ್ಮಾರ್ಟ್ ಕ್ಲಾಸ್, ಕಂಪ್ಯೂಟರ್, ಆಧುನಿಕ ತಂತ್ರಜ್ಞಾನ ಬಳಸಿ ಶಿಕ್ಷಣ ನೀಡುತ್ತಿರುವುದು ಹೆಚ್ಚು ಭರವಸೆಯನ್ನು ಮೂಡಿಸುತ್ತಿದೆ. ಇಂತಹ ಉತ್ತಮ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಪ್ರಜೆಗಳಾಗುವಂತೆ ಕರೆ ನೀಡಿದ ಅವರು, ವಿದ್ಯಾರ್ಥಿಗಳಿಗೆ ಸಹಾಯ ಮಾಡುವ ಸಂಸ್ಥೆಗಳಿಗೆ ಇಲಾಖೆ ಪರವಾಗಿ ಧನ್ಯವಾದಗಳನ್ನು ಅರ್ಪಿಸುವದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಇಸಿಓ ಹರೀಶ್, ಎಸ್.ಬಿ. ಅಣ್ಣಿಗೇರಿ, ಆರ್.ಡಿ. ಕಾಲಾಯಗರ, ಆರ್.ಎಫ್. ಕಪ್ಪಾತ್ತನವರ, ತಿಪ್ಪನಾಯಕ್, ದೀಪಾ ಬೆಸ್ಮ್, ಶಂಕರ ಕಲಾಲ್, ಚಂದ್ರಪ್ಪ ಮೇಗಲಮನಿ, ಮೇರಾಮೋಹಿದೀನ್ ಶಿಗ್ಗಾವ ಮುಂತಾದವರಿದ್ದರು.

ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ